ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 07

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಬುಧವಾರ: 10-12-2025

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

## ದೀಪಾ ಭಾಸ್ತಿ ಅವರೊಂದಿಗೆ ಸಂವಾದ ನಾಳೆ



**ಕಲಬುರಗಿ,ಡಿ.9–**ನಗರದ ಸಿಟಿ ಸೆಂಟ್ರಲ್ ಮಾಲ್‌ನಲ್ಲಿರುವ ಸಪ್ನ ಬುಕ್ ಹೌಸ್‌ನಲ್ಲಿ ಡಿ.10 ರಂದು ಸಂಜೆ 5 ಗಂಟೆಗೆ ಬೂಕರ್ ಪ್ರಶಸ್ತಿ ಪುರಸ್ಕೃತ ಹಾರ್ಟ್ ಲ್ಯಾಂಪ್ ಪುಸ್ತಕದ ಅನುವಾದಕಿ ದೀಪಾ ಭಾಸ್ತಿ ಅವರೊಂದಿಗೆ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕತೆಗಾರ್ತಿ ಸಂಧ್ಯಾ ಹೊನಗುಂಟಿಕರ್, ಪ್ರೊ.ಹೆಚ್.ಟಿ.ಪೋತೆ, ಬೋಡೆ ರಿಯಾಜ್ ಅಹ್ಮದ್, ವಿಕ್ರಮ್ ವಿಸಾಜಿ, ಎಂ.ಮಹೇಂದ್ರ ಅವರು ಸಂವಾದದಲ್ಲಿ ಭಾಗವಹಿಸಲಿದ್ದಾರೆ. ಸಾಹಿತಿಗಳು, ಸಾಹಿತ್ಯಾಸಕ್ತರು ಈ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು ಎಂದು ಸಪ್ನ ಬುಕ್ ಹೌಸ್‌ನ ಕಲಬುರಗಿ ಶಾಖೆ ವ್ಯವಸ್ಥಾಪಕ ಮಹಾಂತೇಶ ಮಠ ಪ್ರಕಟಣೆಯಲ್ಲಿ ಕೋರಿದ್ದಾರೆ.

# ತಡವಾಗಿ ಆರಂಭವಾದ ವಿಧಾನ ಸಭೆ ಕಲಾಪ, ಪ್ರತಿಪಕ್ಷಗಳ ಆಕ್ರೋಶ

**ಬೆಳಗಾವಿ ಡಿ.9–** ವಿಧಾನ ಸಭೆಯ ಕಲಾಪ ತಡವಾಗಿ ಆರಂಭವಾಗಿದ್ದಕ್ಕೆ ವಿರೋಧ ಪಕ್ಷಗಳ ನಾಯಕರು ಮತ್ತು ಶಾಸಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು. ಆರಂಭವಾಗುತ್ತಿದ್ದಂತೆ ಬಿಜೆಪಿಯ ಸದಸ್ಯ ಎಸ್.ಸುರೇಶ್ ಕುಮಾರ್, ಯುಟಿ ಖಾದರ್ ಅವರು ಸಭಾಧ್ಯಕ್ಷರಾದ ಬಳಿಕ ಹೊಸ ಸಂಪ್ರದಾಯಗಳು ಜಾರಿಗೆ ಬಂದಿವೆ.

ಕಲಾಪ ಯಾವ ಸಮಯಕ್ಕೆ ಶುರುವಾಗಲಿದೆ, ಎಷ್ಟು ಹೊತ್ತಿಗೆ ಸದನಕ್ಕೆ ಬರಬೇಕು ಎಂಬ ಸಂದೇಶ ಎಲ್ಲಾ ಸದಸ್ಯರಿಗೂ ಬರುತ್ತಿದೆ. ಅದರಂತೆ ಇಂದು ಬೆಳಗ್ಗೆ 9.45 ಕ್ಕೆ ನಾವು ಇಲ್ಲಿಗೆ ಬಂದಿದ್ದೇವೆ 11.10 ಗಂಟೆಯಾದರೂ ಕಲಾಪ ಇನ್ನೂ ಶುರುವಾಗಿಲ್ಲ. ಹಾಗಿದ್ದ ಮೇಲೆ ನಾವು ಏಕೆ ಮುಂಚಿತವಾಗಿ ಬರಬೇಕು? ಸಭಾಧ್ಯಕ್ಷರ ಮಾತಿಗೆ ಬೆಲೆ ಇಲ್ಲವೇ ? ಕೆಲ ಸಚಿವರನ್ನು ಹೊರತುಪಡಿಸಿದರೆ ಬಹುತೇಕ ಮಂದಿ ಗೈರು ಹಾಜರಾಗಿದ್ದಾರೆ ಎಂದು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದಕ್ಕೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಧ್ವನಿಗೂಡಿಸಿದರು. ನೀವು ಪ್ರತಿಭಟನೆಗೆ ಹೋಗುವುದಾಗಿ ಹೇಳಿದ್ದಿರಲ್ಲವೇ ಎಂದು ಸಭಾಧ್ಯಕ್ಷರು ಪ್ರಶ್ನಿಸಿದರು. ನೀವು ನಮನ್ನು ಇಕ್ಕಟ್ಟಿಗೆ



ಸಿಲುಕಿಸಿದ್ದೀರಾ ಅಂತ ಪ್ರತಿಭಟನೆಗೆ ಹೋಗಲು ಬಿಡುತ್ತಿಲ್ಲ, ಇಲ್ಲಿ ನಿಲುವಳಿ ಸೂಚನೆ ಮಂಡಿಸಲು ಸಮಯ ಸಿಗುತ್ತಿಲ್ಲ ಎಂದು ಅಶೋಕ್ ಅಸಹನೆ ವ್ಯಕ್ತ ಪಡಿಸಿದರು.

ಪ್ರಶ್ನೋತ್ತರದ ಬಳಿಕ ನಿಲುವಳಿ ಸೂಚನೆಗೆ ಅವಕಾಶ ನೀಡುವುದಾಗಿ ಸಭಾಧ್ಯಕ್ಷರು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಕಂದಾಯ ಸಚಿವ ಕೃಷ್ಣ ಭೈರೇಗೌಡ, ಬಹುತೇಕ ಎಲ್ಲಾ ಸಚಿವರು ಹಾಜರಿದ್ದಾರೆ. ಕಲಾಪ ಆರಂಭವಾಗುವುದು ತಡವಾದ ಕಾರಣಕ್ಕೆ ಮೊಗಸಾಲೆ ಯಲ್ಲಿರಬಹುದು. ಈ ಹಿಂದೆ ಯಾವ ರೀತಿ ಅಧಿವೇಶನ ನಡೆದಿದೆ ಎಂಬುದನ್ನು ನಾವೆಲ್ಲ ನೋಡಿದ್ದೇವೆ ಎಂದು ತಿರುಗೇಟು ನೀಡಿದರು.

ಈ ಸಂದರ್ಭದಲ್ಲಿ ಸುರೇಶ್ ಕುಮಾರ್ ಅವರು ದೃಷ್ಟಾಂತವೊಂದನ್ನು ಉಲ್ಲೇಖಿಸಿದರು. ಪ್ರತಿ ದಿನ ತಡವಾಗಿ ಬರುತ್ತಿದ್ದ ರೈಲೊಂದು ಒಂದು ದಿನ ಸರಿ ಸಮಯಕ್ಕೆ ಸರಿಯಾಗಿ ಬಂದಿತ್ತು. ಊರಿನವರು ಖುಷಿಯಾಗಿ ರೈಲಿಗೆ ಹಾರ ಹಾಕಿ ಪೂಜೆ ಮಾಡಿದರು. ಆದರೆ ತಡವಾಗಿ ಗೊತ್ತಾಗಿದ್ದು ಏನು ಎಂದರೆ ಅದು ನಿನ್ನೆಯ ದಿನ ಬರಬೇಕಾಗಿದ್ದ ರೈಲು ಎಂದು ಹೇಳಿದರು .


ಸಭಾಧ್ಯಕ್ಷ ಯು.ಟಿ.ಖಾದರ್, ಸುವರ್ಣಸೌಧದ ಭವ್ಯ ಮೆಟ್ಟಿಲುಗಳ ಮೇಲೆ ದೇಶದಲ್ಲೇ ದೊಡ್ಡದಾದ ರಾಷ್ಟ್ರಧ್ವಜವನ್ನು ಅನಾವರಣಗೊಳಿಸುವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಅದರಲ್ಲಿ ಭಾಗವಹಿಸಲು ಆಡಳಿತ ಮತ್ತು ವಿರೋಧ ಪಕ್ಷದ ಎಲ್ಲರಿಗೂ ಆಹ್ವಾನ ನೀಡಲಾಗಿತ್ತು. ವಿರೋಧ ಪಕ್ಷದವರು ಬಂದಿರಲ್ಲಿಲ್ಲ. ಅದನ್ನು ಮುಗಿಸಿಕೊಂಡು ಬರುವುದು ತಡವಾಗಿದೆ. ಮುಂದೆ ನಿಗದಿತ ಸಮಯಕ್ಕೆ ಕಲಾಪ ಆರಂಭವಾಗಲಿದೆ ಎಂದು ಹೇಳಿ, ಚರ್ಚೆಗೆ ತೆರೆ ಎಳೆದರು.

## ಶ್ರೀ ಮಾರಿಕಾಂಬೆ ದೇವಿಯ ವೈಭವದ ಉಚ್ಚಾಯ ಮಹೋತ್ಸವ

ಧೈರ್ಯದ ದಾರಿ

**ಮಾನ್ವಿ,ಡಿ.9–** ಪಟ್ಟಣದ ಕೋನಾಪುರ ಪೇಟೆಯಲ್ಲಿನ ಪಟ್ಟಣದದೇವತೆ ಶ್ರೀ ಮಾರಿಕಾಂಬೆ ದೇವಿಯ ದೇವಸ್ಥಾನದಲ್ಲಿ ಜಾತ್ರಮಹೋತ್ಸಾವ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು ಬೆಳಿಗ್ಗೆ ಶ್ರೀ ಮಾರಿಕಾಂಬೆ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಉಡಿತುಂಬುವ ಕಾರ್ಯಕ್ರಮ ನಡೆಯಿತು.

ಸಂಜೆ ಪಲ್ಲಕ್ಕಿ ಉತ್ಸವ ಹಾಗೂ ಉತ್ಸವ ಮೂರ್ತಿಯನ್ನು ಉಚ್ಚಾಯದಲ್ಲಿ ಕೂಡಿಸಿ ಡೋಳ್ಳು ಮತ್ತು ಕೋಲಾಟ ಸೇರಿದಂತೆ ವಿವಿಧ ಜನಪದ ಕಲಾ ತಂಡಗಳೊಂದಿಗೆ ಸಾವಿರಾರು ಭಕ್ತರಿಂದ ಉಚ್ಚಾಯ ಮಹೋತ್ಸಾವ ನಡೆಯಿತು.



ಶಂಕ್ರಯ್ಯಸ್ವಾಮಿ, ಸುವರ್ಣಗಿರಿ ಮಠ, ರಾಜ್ಯ ಕುರುಬರ ಸಂಘದ ರಾಜ್ಯಾಧ್ಯಕ್ಷರಾದ ಎಂ.ಈರಣ್ಣ, ಜೆಡಿಎಸ್ ರಾಜ್ಯ ಯುವ ಘಟಕದ ರಾಜ್ಯ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ, ಕೆ.ಬಸವಂತಪ್ಪ,ರಾಮಕೃಷ್ಣ.ಡಿ, ಗುರುಸಿದ್ದಪ್ಪ ಕಣ್ಣೂರು,ಪುರಸಭೆ ಸದಸ್ಯರಾದ ರೇಣುಕರೆಡ್ಡಿ ದೇವಸ್ಥಾನದ ಅಧ್ಯಕ್ಷರಾದ ದಡಿ ಶ್ರೀನಿವಾಸ,ಬಿ, ಖಜಾಂಚಿ,ಉಪಾಧ್ಯಕ್ಷ ನರಸಿಂಹ .ಹೆಚ್,ಹುಸೇನಪ್ಪ ಜಗ್ಲಿ, ಪಿ.,ಆನೀಲ್ ಕುಮಾರ ಜಯಪ್ರಕಾಶ, ಪ್ರವೀಣ ಕುಮಾರ, ಉಮೇಶರೆಡ್ಡಿ,ಕಮಟ್ಟೆ ಗೌಡ, ಹೆಚ್.ನರಸಿಂಹ, ಯಂಕಣ್ಣ ಮಾಂತರ್ , ರವಿಕುಮಾರ.ಕೆ, ನಾರಾಯಣಸ್ವಾಮಿ, ಪಿ.ರವಿ ಕುಮಾರ, ವಿಜಯಕುಮಾರ ಹೆಚ್, ಅಮರೇಶ ಮೇಟಿ ಭೋಗವತಿನಾಗಪ್ಪ ಕಬ್ಬೇರ ರಮೇಶ, ಸೇರಿದಂತೆ ಇನ್ನಿತರರು ಇದ್ದರು.

## ಶಿಕ್ಷಣ ಇಲಾಖೆಯಿಂದ ನಗರ ವಲಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ,ಡಿ.9–** ಪಟ್ಟಣದ ಕಾಕತೀಯ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಶಿಕ್ಷಣ ಇಲಾಖೆ ಹಾಗೂ ಕಾಕತೀಯ ಶಿಕ್ಷಣ ಸಂಸ್ಥೆ ಸಂಯು ಕ್ತಾಶ್ರಯದಲ್ಲಿ ನಡೆದ 2025–26 ನೇ ಸಾಲಿನ ಮಾನವಿ ನಗರ ವಲಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮಕ್ಕೆ ತಾಲೂಕು ದೈಹಿಕ ಶಿಕ್ಷಣಾಧಿ ಕಾರಿ ಮಾರುತಿ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿ ಶಾಲೆಯ ವಿದ್ಯಾರ್ಥಿಗಳಿಗೆ ಪಠ್ಯದ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸುವುದರಿಂದ ವಿದ್ಯಾರ್ಥಿಗಳಲ್ಲಿನ ಪ್ರತಿಭೆ ಹೊರಬರುವುದಕ್ಕೆ ಸಾಧ್ಯವಾಗುತ್ತದೆ ಎನ್ನುವ ಉದ್ದೇಶದಿಂದ ಶಿಕ್ಷಣ ಇಲಾಖೆಯು ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು .ವಲಯ ಮಟ್ಟದಿಂದ ರಾಜ್ಯ ಮಟ್ಟದವರೆಗೆ ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದಲ್ಲಿ ಉತ್ತಮವಾದ ವೇದಿಕೆಯನ್ನು ಕಲ್ಪಿಸುತ್ತಿದೆ ಅದ್ದರಿಂದ ಶಾಲೆಯ ಗುರುಗಳು ತಮ್ಮ ವಿದ್ಯಾರ್ಥಿಯಲ್ಲಿನ ಕೌಶಲ್ಯಾವನ್ನು ಗುರುತಿಸಿ ಅವರಿಗೆ ಸರಿಯಾದ ಮಾರ್ಗದರ್ಶನವನ್ನು ನೀಡಿದಲ್ಲಿ ವಿದ್ಯಾರ್ಥಿಗಳು ಉತ್ತಮವಾದ ಸಾಧನೆಯನ್ನು ತೊರುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮಾನ್ವಿ ವಲಯ ಮಟ್ಟದ ವಿವಿಧ ಶಾಲೆಯ ವಿದ್ಯಾರ್ಥಿಗಳು ಭಾರತ ನಾಟ್ಯ. ನೃತ್ಯ,ಜನಪದ ನೃತ್ಯ,ಗಾಯಮ ,ಮಣ್ಣಿನಿಂದ ಆಕೃತಿಗಳ ರಚನೆ,ಚಿತ್ರಕಲೆ,ಭಾಷಣ,ರಂಗೋಲಿ ಸೇರಿದಂತೆ ವಿವಿಧ ವಿಭಾಗಗಳಲ್ಲಿ ತಮ್ಮ ಪ್ರತಿಭೆಯನ್ನು ತೊರಿ ಗಮನ ಸೇಳೆದರು.

ಕಾರ್ಯಕ್ರಮದಲ್ಲಿ ಪ್ರಾ.ಶಾ.ಶಿಕ್ಷಕರ ಸಂಘದ ತಾ.ಅಧ್ಯಕ್ಷರಾದ ಸಂಗಮೇಶ ಮುಧೋಳ್, ಸರಕಾರಿ ನೌಕರರ ಸಂಘದ ತಾ. ಅಧ್ಯಕ್ಷರಾದ ಸುರೇಶ ಕುರ್ಡಿ, ಫ್ರೌಡ ಶಾಲಾ ಶಿಕ್ಷಕರ ಸಂಘದ ತಾ.ಅಧ್ಯಕ್ಷರಾದ ಅಶೋಕ ಕುಮಾರ, ಕಾಕತೀಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಸುಂದರ ಶ್ರೀನಿವಾಸ,ಮುಖ್ಯ ಗುರುಗಳಾದ ವೀರಭದ್ರಗೌಡ, ನಿರ್ದೇಶಕರಾದ ಸೈಯಾದ್ ಮತವಾಲೆ, ಹಂಪಣ್ಣ ಚಂಡೂರ್,ಸಿ.ಆರ್.ಪಿ.ಗಳಾದ ಹಾಲೇಶ್,ಸೋಮಶೇಖರ ಸೇರಿದಂತೆ ವಿವಿಧ ಶಾಲೆಗಳ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

## ಪಲ್ಸ್ ಪೋಲಿಯೋ ಯಶಸ್ವಿಗೊಳಿಸಿ ಝುಳಕಿಮಠ ಕರೆ

ಧೈರ್ಯದ ದಾರಿ

**ಲಿಂಗಸಗೂರು,ಡಿ. 9–**ತಾಲೂಕಿನಲ್ಲಿ ಡಿಸೆಂಬರ 21ರ ಭಾನುವಾರ ದಂದು ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಶೇಕಡ 100 ರಷ್ಟು ಗುರಿ ಸಾಧಿಸಲು ಗ್ರೇಡ್ 3 ತಹಸೀಲ್ದಾರ್ ಬಸವರಾಜ ಝುಳಕಿಮಠ ಅಧಿಕಾರಿಗಳಿಗೆ ಕರೆ ನೀಡಿದ್ದಾರೆ .

ಮಂಗಳವಾರ ನಡೆದ ತಾಲೂಕ ಟಾಸ್ಕ್ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸಂಬಂಧಪಟ್ಟ ಎಲ್ಲಾ ಇಲಾಖೆ ಅಧಿಕಾರಿಗಳು ಸಿಬ್ಬಂದಿಯುವರು ಈ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಜನರಿಗೆ ಸರಿಯಾದ ಮಾಹಿತಿ ನೀಡುವುದು ಮತ್ತು ಹುಟ್ಟಿದ ಮಕ್ಕಳಿಂದ ಹಿಡಿದು 5 ವರ್ಷದೊಳಗಿನ 52.195 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಿರುವ ಆರೋಗ್ಯ ಇಲಾಖೆಗೆ ಸಂಪೂರ್ಣವಾಗಿ ಸಹಕರಿಸಲು ತಿಳಿಸಿದರು. ನಂತರ ಮಾತ ನಾಡಿದ ತಾಲೂಕು ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ಉಮೇಶ್ ಕಳೆದ 12 ವರ್ಷ ದಿಂದ ಭಾರತ ದೇಶದಲ್ಲಿ ಪೋಲಿಯೋ ಪ್ರಕರಣ ಕಂಡುಬಂದಿಲ್ಲವಾದರೂ ನೆರೆ ರಾಷ್ಟಗಳಲ್ಲಿ ಇನ್ನೂ ವರದಿಯಾಗುತ್ತಿರುವ ಕಾರಣ ಪಲ್ಸ್ ಪೋಲಿಯೋ ಮುಂದುವರಿದಿದೆ ಸಮುದಾಯದಲ್ಲಿ ಎಲ್ಲ ಅರ್ಹ ಮಕ್ಕಳಿಗೆ ಲಸಿಕೆ ಹಾಕಿಸಲು ಸಂಘ ಸಂಸ್ಥೆಗಳು ಸಾರ್ವಜನಿಕರು ಕೈಜೋಡಿಸುವಂತೆ ಕೋರಿದರು.

ತಾಲೂಕ ಆರೋಗ್ಯಾಧಿಕಾರಿ ಡಾ: ಅಮರೇಶ ಪಾಟೀಲ ಆರೋಗ್ಯ ಇಲಾಖೆಯ ಕ್ರಿಯಾಯೋಜನೆ ಮಾಹಿತಿ ನೀಡಿ ಒಟ್ಟು 240 ತಂಡಗಳು 480 ಕಾರ್ಯಕರ್ತರು ಒಟ್ಟು 52200



ಮಕ್ಕಳಿಗೆ ಲಸಿಕೆ ಹಾಕುವರು. 85432 ಮನೆಗಳ ಭೇಟಿ. ದೊಡ್ಡಿ ತಾಂಡಾ.ಅಲೆಮಾರಿ ಜನವಸತಿ ತಾಣಗಳು.ಬಸ್ ನಿಲ್ದಾಣ ಗಳಲ್ಲಿಯೂ ಪೋಲಿಯೋ ತಂಡ ಕಾರ್ಯನಿರ್ವಹಿಸುತ್ತವೆ. ಇಲಾಖೆಯ 48 ಮೇಲ್ವಿಚಾರಕರು ಭಾಗವಹಿಸುವರು ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಶಿಶು ಅಭಿವೃದ್ಧಿ ಅಧಿಕಾರಿ ನಾಗರತ್ನ. ಪುರಸಭೆ ಅಧಿಕಾರಿಗಳಾದ ನಟರಾಜ್. ಜಗನ್ನಾಥ. ಆರಿಫಾ.ಗದ್ದೆಪ್ಪ. ಜೆಸ್ಕಾಂ ಅಧಿಕಾರಿ ಬೆನ್ನಪ್ಪ. ಶಿಕ್ಷಣ ಇಲಾಖೆಯ ಮಹಾಂತೇಶ. ಸಾರಿಗೆ ಇಲಾಖೆಯ ಮಹಾರುದ್ರಪ್ಪ ಆರೋಗ್ಯ ಇಲಾಖೆಯ ಡಾ: ಹನುಮಂತರಾಯ ತಳ್ಳಳ್ಳಿ. ಡಾ: ಶಿವನಾಗ. ಡಾ: ಅಭಿಜಿತ್ ,ಡಾ: ನಿರ್ಮಲಾ ಪಾಟೀಲ್, ಡಾ: ರವಿಕಿರಣ,ಡಾ: ಇಕ್ಬಾಲ್ ,ಡಾ: ಸೂಗೂರೇಶ. ಅರ್ಜುನ್. ಪ್ರಾಣೇಶ್. ರಾಘವೇಂದ್ರ. ಗುರು ಪ್ರಸಾದ್. ಶಿವಲೀಲಾ ಮೇಟಿ. ಪದ್ಮಾವತಿ ನಾಯಕ್. ಬಸವ 'ಲಿಂಗ. ವಾಸೀಂ ರೆಹಮಾನ. ಇತರರು ಸಭೆಯಲ್ಲಿ ಭಾಗವ 'ಹಿಸಿದ್ದರು.

## ಜಿಲ್ಲಾಧಿಕಾರಿ ನಿತೀಶ್ ಕೆ ಅವರಿಗೆ ಕಂದಾಯ ಇಲಾಖೆಯಿಂದ ಅಭಿನಂದನಾ ಪತ್ರ

ಧೈರ್ಯದ ದಾರಿ

**ರಾಯಚೂರು,ಡಿ.9–**ಅಟಲ್‌ಜೀ ಜನಸ್ನೇ ಹಿ ಕೇಂದ್ರ ಯೋಜನೆಯಡಿಯಲ್ಲಿ ರಾಜ್ಯದ ಸಾರ್ವಜನಿಕರಿಗೆ ವಿವಿಧ ಪ್ರಮಾಣ ಪತ್ರಗಳ ಸೇವೆಯನ್ನು ನೀಡಲು ರಾಯ ಚೂರು ಜಿಲ್ಲೆಯ ನಾಡಕಚೇರಿಗಳಲ್ಲಿ ಅಕ್ಟೋಬರ್ 2025ರ ಮಾಹೆಯಲ್ಲಿ ಸ್ವೀಕರಿಸಲಾಗಿರುವ 26,831 ಅರ್ಜಿಗಳನ್ನು ನಿಗದಿತ ಅವಧಿಗಿಂತ ಮೊದಲೇ ಶೇ.99.93 ರಷ್ಟು ವಿಲೇವಾರಿ ಮಾಡಿ 6.4 ಸಿಗ್ಮಾ ಮೌಲ್ಯವನ್ನು ಪಡೆದಿರುತ್ತೀರಿ.

8.49 ವಿಲೇ ವಾರಿ ಸೂಚ್ಯಂಕದ ಪ್ರಕಾರ ತಮ್ಮ ಜಿಲ್ಲೆಯಲ್ಲಿ 9.49 ಪಟ್ಟು ನಿಗಧಿತ ಅವಧಿ ಗಿಂತ ಅರ್ಜಿಗಳನ್ನು ಶೀಘ್ರವಾಗಿ ವಿಲೇ ವಾರಿ ಮಾಡಿ, ಅಕ್ಟೋಬರ್–2025ರ ಮಾಹೆಯಲ್ಲಿ ತಮ್ಮ ಜಿಲ್ಲೆಯು ರಾಜ್ಯ ಮಟ್ಟದಲ್ಲಿ ತೃತೀಯ ಸ್ಥಾನ ಪಡೆದಿರುವುದು ಶ್ಲಾಘನೀಯ ಎಂದು ಕಂದಾಯ ಇಲಾ ಖೆಯ ಆಯುಕ್ತರಾದ ಮುಲ್ಲೈ ಮುಹಿಲನ್ ಎಂ.ಪಿ.ಅವರು ರಾಯಚೂರಿನ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರಿಗೆ ಅಭಿನಂ ದನೆ ತಿಳಿಸಿದ್ದಾರೆ.

ನಿಮ್ಮ ಜಿಲ್ಲೆಯಲ್ಲಿನ ಈ ಕಾರ್ಯ ಸಾಧನೆಗೆ ನಿಮ್ಮ ಹಾಗೂ ನಿಮ್ಮ ನಾಡ ಕಚೇರಿ ಅಥವಾ ಅಟಲ್‌ಜೀ ಜನಸ್ನೇಹಿ ಕೇಂದ್ರದ ಸಿಬ್ಬಂದಿಗಳ ಸಹಕಾರ, ಕಾರ್ಯತತ್ಪರತೆ ಕಾರಣವಾಗಿರುತ್ತದೆ. ಅದ್ದರಿಂದ ಅಟಲ್ ಜೀ ಜನಸ್ನೇಹಿ ನಿರ್ದೇಶನಾಲ ಯದ



ಪರವಾಗಿ ನಿಮ್ಮ ತಂಡಕ್ಕೆ ನನ್ನ ಅಭಿನಂ ದನೆಯನ್ನು ವ್ಯಕ್ತಪಡಿಸಲು ಇಚ್ಛಿಸುತ್ತೇನೆ. ಇನ್ನು ಮುಂದಿನ ದಿನಗಳಲ್ಲಿಯೂ ಸಹ ನಿಮ್ಮಿಂದ ಇದೇ ರೀತಿಯ ಸಹಕಾರ ಹಾಗೂ ಕಾರ್ಯಕ್ಷಮತೆಯನ್ನು ನಿರೀಕ್ಷಿ ಸುತ್ತೇನೆ ಎಂದು ಕಂದಾಯ ಇಲಾಖೆಯ ಆಯುಕ್ತರು ಅಭಿನಂದನಾ ಪತ್ರದಲ್ಲಿ ತಿಳಿಸಿದ್ದಾರೆ.

# ಸಮತಾ ರಾಜ್ಯ ನಿರ್ಮಾಣದ ಸಂದೇಶದೊಂದಿಗೆ ಜನಸಂಪರ್ಕ ಚಳುವಳಿ




**ಜೇವರ್ಗಿ:ಡಿ.9–**ಭಾರತ ಕಮ್ಯುನಿಸ್ಟ್ ಪಕ್ಷ (ಅಕಬ) ಜೇವರ್ಗಿ ವಿಧಾನಸಭಾ ಕ್ಷೇತ್ರದಲ್ಲಿ ಎರಡು ದಿನಗಳ ಜಾಥಾ ಕಾರ್ಯಕ್ರಮವನ್ನು ಭವ್ಯವಾಗಿ ಪ್ರಾರಂಭಿಸಿದೆ. ಸಮತಾ ರಾಜ್ಯದ ಕನಸು, ಶೋಷಣೆಯ ವಿರುದ್ಧದ ಶತಮಾನದ ಪಯಣ ಮತ್ತು ಜನಾಂದೋಲನಗಳ ಇತಿಹಾಸವನ್ನು ಜನತೆಗೆ ತಲುಪಿಸುವ ಉದ್ದೇಶದಿಂದ ಈ ಜಾಥಾವನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿದೆ. ರೈತರು, ಕಾರ್ಮಿಕರು, ವಿದ್ಯಾರ್ಥಿಗಳು, ಯುವಕರು, ಮಹಿಳೆಯರು, ದಲಿತರು, ಅಲ್ಪಸಂಖ್ಯಾತರು, ಆದಿವಾಸಿಗಳು ಹಾಗೂ ಅಲೇಮಾರಿ ಸಮುದಾಯಗಳ ಹಕ್ಕುಗಳನ್ನು ರಕ್ಷಿಸುವ ಧ್ಯೇಯದೊಂದಿಗೆ ಅಕಬ ಈ ಜಾಥಾವನ್ನು ಜೇವರ್ಗಿ ಮತಕ್ಷೇತ್ರದಲ್ಲಿ ಆರಂಭಿಸಿದೆ.

ಸಭೆಯಲ್ಲಿ ಮಾತನಾಡಿದ ಪಕ್ಷದ ನಾಯಕರು ಅಕಬ ಯ ಇತಿಹಾಸವನ್ನು ಸ್ಮರಿಸಿ ಮಾತನಾಡಿದರು. ದೇಶದ ಸ್ವಾತಂಣಜಿಥಿ ಚಳುವಳಿಯಿಂದ ಹಿಡಿದು ಕೈಯೂರು ರೈತ ಹೋರಾಟ, ಚಿತ್ರಗಾಂಗ್ ಹೋರಾಟ, ಪುದುಚೇರಿ ವಿಮೋಚನಾ ಚಳುವಳಿ, ತೆಲಂಗಾಣ ಸಶಸ್ತ್ರ ಹೋರಾಟದವರೆಗೆ ಅನೇಕ ಕ್ರಾಂತಿಕಾರಿ ಚಟುವಟಿಕೆಗಳಲ್ಲಿ ಅಕಬ ಯ ಸಾವಿರಾರು ನಾಯಕರು ಭಾಗವಹಿಸಿರುವುದನ್ನು ವಿವರಿಸಿದರು. ಅನೇಕರು ಪ್ರಾಣತ್ಯಾಗ ಮಾಡಿದರೆ, ಲಕ್ಷಾಂತರ ಕಾರ್ಯಕರ್ತರು ಜೈಲು ಶಿಕ್ಷೆ ಅನುಭವಿಸಿದ್ದಾರೆ. ಈ ಹೋರಾಟಗಳು ದೇಶದ ದುಡಿಯುವ ವರ್ಗದ ಹಕ್ಕುಗಳ ರಕ್ಷಣೆಗೆ ಅಕಬ ನೀಡಿದ ಭಾರತದ ಇತಿಹಾಸದಲ್ಲೇ ಅಚ್ಚಳಿಯದ ಕೊಡುಗೆಯೆಂದು ಅವರು ಹೇಳಿದರು.

ಜೇವರ್ಗಿ ಪ್ರದೇಶದಲ್ಲಿ ಎಂ.ಎಸ್.ಕೆ. ಮಿಲ್, ಶಹಾಬಾದ್, ವಾಡಿ ಮುಂತಾದ ಕೈಗಾರಿಕಾ ಕೇಂದ್ರಗಳಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರನ್ನು ಸಂಘಟಿಸಿ ಅವರ ಹಕ್ಕುಗಳಿಗಾಗಿ ಅಕಬ ನಡೆಸಿದ ಹೋರಾಟಗಳನ್ನೂ ಈ ಸಂದರ್ಭದಲ್ಲಿ ನೆನಪಿಸಲಾಯಿತು. ಸಾರ್ವಜನಿಕ ಆರೋಗ್ಯ, ಶಿಕ್ಷಣ, ಉದ್ಯೋಗ ಮತ್ತು ಕಲ್ಯಾಣ ಕರ್ನಾಟಕ ಭಾಗಕ್ಕೆ ವಿಶೇಷ ಸ್ಥಾನಮಾನ ದೊರೆಕಿಸುವ ಹೋರಾಟದಲ್ಲೂ ಅಕಬ ನಾಯಕರ ಪಾತ್ರ ಮಹತ್ತರವಾಗಿತ್ತು ಎಂದು ಜಾಥಾ ತಂಡ ಸ್ಪಷ್ಟಪಡಿಸಿದೆ.

ಪಕ್ಷದ ನಾಯಕರು, ಇಂದಿನ ಭಾರತದ ಸಾಮಾಜಿಕ–ಆರ್ಥಿಕ ಸ್ಥಿತಿಯನ್ನು ಉಲ್ಲೇಖಿಸಿ ಮಾತನಾಡಿದರು. ನಿರಂತರವಾಗಿ ಹೆಚ್ಚುತ್ತಿರುವ ಬಡತನ, ನಿರುದ್ಯೋಗ, ರೈತರ ದಿವಾಳಿ ಮತ್ತು ಆತ್ಮಹತ್ಯೆಗಳು, ಮಹಿಳೆಯರ ಮೇಲಿನ ಹಲ್ಲೆಗಳು, ಕಾರ್ಮಿಕ ಹಕ್ಕುಗಳ ನಿರ್ನಾಮ, ಸಾರ್ವಜನಿಕ ಸಂಪತ್ತಿನ ಲೂಟಿ, ಜಾತಿ–ಮತ ಬೇಧಗಳ ರಾಜಕೀಯದಿಂದ ದೇಶ ಗೊಂದಲಕ್ಕೆ ಒಳಗಾಗುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು. "ಈ ಸಂದರ್ಭಗಳಲ್ಲಿ ಅಕಬ ಮಾತ್ರ ಜನರ ಧ್ವನಿಯನ್ನು ಪ್ರಾಮಾಣಿಕವಾಗಿ ಪ್ರತಿಬಿಂಬಿಸುತ್ತಿದೆ," ಎಂದು ನಾಯಕರು ಹೇಳಿದರು.

ಕಲಬುರಗಿ ಜಿಲ್ಲೆಯ ಕಮ್ಯುನಿಸ್ಟ್ ಚಟುವಟಿಕೆಗಳ ಇತಿಹಾಸಕ್ಕೂ ಸಭೆಯಲ್ಲಿ ವಿಶೇಷ ಸ್ಥಾನ ನೀಡಿತು. ರಾವ್ ಬಹಾದ್ದೂರ್ ಗೌಡ, ಮಖ್ದೂಮ್ ಮೊಯಿದ್ಯುದ್ದೀನ್, ಶ್ರೀನಿವಾಸ ಗುಡಿ, ನರಸಿಂಗರಾವ್ ಕುಲಕರ್ಣಿ, ಗಂಗಾಧರ ನಮೋಸಿ, ಶರಣಪ್ಪ ಭೈರಿ, ಕೆ.ಬಿ. ತಾಣಪ್ಪಾದಂತಹ ನಾಯಕರ ತ್ಯಾಗ, ನಿಲುವು ಮತ್ತು ಹೋರಾಟಗಳ ವಿವರಗಳನ್ನು ಜಾಥಾದಲ್ಲಿ ಸ್ಮರಿಸಲಾಯಿತು. ಇವರು ಭಾಗದ ಜನರ ಹಕ್ಕುಗಳಿಗಾಗಿ, ಜಮೀನುದಾರರ ಶೋಷಣೆಯ ವಿರುದ್ಧ ಮತ್ತು ಕಾರ್ಮಿಕರ ಹಕ್ಕುಗಳಿಗಾಗಿ ಸದಾ ಹೋರಾಡಿದ ಅವರನ್ನು ಅಕಬ ನಿಜವಾದ ಪ್ರೇರಣೆ ಮೂಲವೆಂದು ಅಭಿವಂದಿಸಿದೆ.

ಜಾಥಾ ಇಲ್ಲಿನ ಡಾ ಬಿ ಆರ್ ಅಂಬೇಡ್ಕರ್ ಪುತ್ಥಳಿಯಿಂದ ಮಹಿಬೂಬ್ ಫಂಕ್ಷನ್ ಹಾಲ್ ವರೆಗೂ ಮೆರವಣಿಗೆ ಮೂಲಕ ನಡೆದು ಸಮಾವೇಶಗೊಂಡಿತು, ಉದ್ಘಾಟನಾ ಕಾರ್ಯಕ್ರಮದಲ್ಲಿ ಡಾ. ಮಹೇಶ್ ಕುಮಾರ್ ರಾಠೊಡ, ಮಲ್ಲಿಕಾರ್ಜುನ್ ದೊಡ್ಡಮನಿ, ಮಹಮ್ಮದ್ ಚೌದರಿ, ರಾಘವೇಂದ್ರ, ರಸೀದ್ ಮುಲ್ಲಾ, ಬಸವರಾಜ ದೊರಿ,, ಹೊನ್ನಪ್ಪ ಪೂಜಾರಿ, ಖಾಜಾ ಪಟೇಲ್, ಅಂಬಮ್ಮ ಮದರಿ, ಶಾಂತಬಾಯಿ, ಕಮಲಾಬಾಯಿ, ಪರಮೇಶ್ವರ್ ಮುಂತಾದವರು ಮತ್ತು ಅನೇಕ ಅಕಬ ಕಾರ್ಯಕರ್ತರು ಉಪಸ್ಥಿತರಿದ್ದರು. "ಪಕ್ಷವನ್ನು ಇನ್ನಷ್ಟು ಜನರ ಬಳಿ ತಲುಪಿಸುವುದು, ಹೊಸ ಪೀಳಿಗೆಗೆ ಅಕಬ ಯ ನಿಜವಾದ ಹೋರಾಟದ ಇತಿಹಾಸ ತಿಳಿಸುವುದು ನಮ್ಮ ಗುರಿ" ಎಂದು ಅವರು ತಿಳಿಸಿದರು.

ಸಭೆಯ ಅಂತ್ಯದಲ್ಲಿ ಅಕಬ ನಾಯಕರು  "ಸಮತಾ ರಾಜ್ಯದ ಕನಸು ನಮ್ಮದು ಮಾತ್ರವಲ್ಲ, ಇದು ನಿರಂತರ ಹೋರಾಡುತ್ತಿರುವ ದುಡಿಯುವ ಜನರ ಕನಸು. ಈ ಹೋರಾಟದಲ್ಲಿ ಎಲ್ಲರೂ ನಮ್ಮ ಜೊತೆ ನಿಲ್ಲಬೇಕು" ಎಂದು ಜನರಿಗೆ ಕರೆ ನೀಡಿದರು.

# ಡಿ.16ಕ್ಕೆ ಐಪಿಎಲ್ ಆಟಗಾರರ ಹರಾಜು

**ಮುಂಬೈ, ಡಿ. 9–** ಇದೇ 16 ರಂದು ಅಬುಧಾಬಿಯಲ್ಲಿ ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್ ಹರಾಜಿನಲ್ಲಿ ಒಟ್ಟು 350 ಕ್ರಿಕೆಟಿಗರು ಹರಾಜಾಗಲಿದ್ದಾರೆ.ಇದರಲ್ಲಿ 240 ಭಾರತೀಯರು ಮತ್ತು 110 ವಿದೇಶಿ ಆಟಗಾರರು ಇರುತ್ತಾರೆ. ಇತ್ತಿ?ಚೆಗೆ ತಮ್ಮ ಏಕದಿನ ನಿವೃತ್ತಿಯಿಂದ ಹೊರಬಂದ ದಕ್ಷಿಣ ಆಫ್ರಿಕಾದ ವಿಕೆಟ್ ಕೀಪರ್ ಕಮ್ ಬ್ಯಾಟರ್ ಕ್ವಿಂಟನ್ ಡಿ ಕಾಕ್ ಅಂತಿಮ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ಡಿ ಕಾಕ್ 1 ಕೋಟಿ ರೂ. ಮೂಲ ಬೆಲೆಯೊಂದಿಗೆ ಪಟ್ಟಿಗೆ ತಡವಾಗಿ ಸೇರ್ಪಡೆಯಾಗಿದ್ದಾರೆ. ಪಟ್ಟಿಯಲ್ಲಿ ಆಸ್ಟ್ರೇಲಿಯಾದ ಬ್ಯಾಟ್ಸ್‌ಮನ್ ಸ್ಟಿವ್ ಸ್ಮಿತ್ 2 ಕೋಟಿ ರೂ. ಮೂಲ ಬೆಲೆಯೊಂದಿಗೆ ಸೇರಿದ್ದಾರೆ. ಸ್ಮಿತ್ ಕೊನೆಯ ಬಾರಿಗೆ 2021 ರಲ್ಲಿ ಐಪಿಎಲ್‌ನಲ್ಲಿ ಆಡಿದ್ದರು.

ಆಟಗಾರರ ಹರಾಜಿನಲ್ಲಿ ಒಟ್ಟು 1390 ಆಟಗಾರರು ನೋಂದಾಯಿಸಿಕೊಂಡಿದ್ದಾರೆ. ವಿಶ್ವದ ಅತಿದೊಡ್ಡ ಟಿ20 ಲೀಗ್‌ನ 19 ನೇ ಆವೃತ್ತಿಗಾಗಿ 10 ತಂಡಗಳಲ್ಲಿ ಲಭ್ಯವಿರುವ 77 ಸ್ಥಾನಗಳಿಗೆ 350 ಜನರನ್ನು ಅಂತಿಮವಾಗಿ ಆಯ್ಕೆ ಮಾಡುವ ಮೊದಲು ಸಂಖ್ಯೆಯನ್ನು 1005 ಆಟಗಾರರಿಗೆ ಇಳಿಸಲಾಯಿತು.

ಹರಾಜಿನಲ್ಲಿರುವ ಮೊದಲ ಆಟಗಾರರಲ್ಲಿ ಭಾರತ ಮತ್ತು ಮುಂಬೈ ಬ್ಯಾಟ್ಸ್‌ಮನ್‌ಗಳಾದ ಪೃಥ್ವಿ ಶಾ ಮತ್ತು ಸರ್ಫರಾಜ್ ಖಾನ್ ಸೇರಿದ್ದಾರೆ, ಇಬ್ಬರೂ ತಲಾ 75 ಲಕ್ಷ ರೂ. ಮೂಲ ಬೆಲೆಯನ್ನು ಕಾಯ್ದುಕೊಂಡಿದ್ದಾರೆ.ಐಪಿಎಲ್ ಹಂಚಿಕೊಂಡ ಪಟ್ಟಿಯಲ್ಲಿ ಇಬ್ಬರು ಆಸ್ಟ್ರೇಲಿಯಾದ ಕ್ಯಾಮರೂನ್ ಗ್ರೀನ್ ಮತ್ತು ಜೇಕ್ ಫ್ರೇಸರ್‌ಮೆಕ್‌ಗುರ್ಕ್, ನ್ಯೂಜಿಲೆಂಡ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್‌ನ ಮಾಜಿ ಆರಂಭಿಕ ಆಟಗಾರ ಡೆವೊನ್ ಕಾನ್ವೆ? ಮತ್ತು ದಕ್ಷಿಣ ಆಫ್ರಿಕಾದ ಡೇವಿಡ್ ಮಿಲ್ಲರ್ ತಲಾ 2 ಕೋಟಿ ರೂ. ಮೂಲ ಬೆಲೆಯನ್ನು ಕಾಯ್ದುಕೊಂಡಿದ್ದಾರೆ.

ಕೋಲ್ಕತ್ತಾ ನೈಟ್ ರೈಡರ್ಸ್‌ನಿಂದ ಬಿಡುಗಡೆಯಾದ ವೆಂಕಟೇಶ್ ಅಯ್ಯರ್ 2 ಕೋಟಿ ರೂ. ಮೂಲ ಬೆಲೆಯಲ್ಲಿ ತಮ್ಮನ್ನು ಪಟ್ಟಿ ಮಾಡಿದ್ದಾರೆ.ಮೂರು ಬಾರಿ ವಿಜೇತರಾದ ಕೆಕೆಆರ್ 64.3 ಕೋಟಿ ರೂ.ಗಳ ಅತಿದೊಡ್ಡ ಹಣದೊಂದಿಗೆ ಹರಾಜಿಗೆ ಹೋಗಲಿದ್ದು, ನಂತರ ಐದು ಬಾರಿ ಚಾಂಪಿಯನ್ ಸಿಎಸ್‌ಕೆ 43.4 ಕೋಟಿ ರೂ.ಗಳೊಂದಿಗೆ ಹರಾಜಿಗೆ ಹೋಗಲಿದೆ. ಒಮ್ಮೆ ಐಪಿಎಲ್ ಗೆದ್ದಿರುವ ಸನ್‌ರೈಸರ್ಸ್ ಹೈದರಾಬಾದ್ ತಂಡವು 25.5 ಕೋಟಿ ರೂ.ಗಳ ಮೂರನೇ ಅತಿ ಹೆಚ್ಚು ಹಣದೊಂದಿಗೆ ಮೂರನೇ ಸ್ಥಾನದಲ್ಲಿದೆ.

# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ರಾಯಚೂರು,ಡಿ.9–**ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಿಲ್ಲೆಯ 08 ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು, ಇಲಾಖೆಯ ವೆಬ್‌ಸೈಟ್ ವಿಳಾಸ:https://karnemakaone.kar.nic.in/abcd/ ನಲ್ಲಿ ಜನವರಿ 7 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ರಾಯಚೂರು, ಗಿಲ್ಲೇಸುಗೂರು, ಮಾನವಿ, ಸಿರವಾರ, ಸಿಂಧನೂರು, ತುರವಿಹಾಳ ಲಿಂಗಸುಗೂರು ಹಾಗೂ ದೇವದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯವನ್ನು ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಕೃಷಿ ವಿವಿಯಲ್ಲಿ ತರಬೇತಿ ಕಾರ್ಯಕ್ರಮ

**ರಾಯಚೂರು,ಡಿ.9–** ಭಾರತ ಸರ್ಕಾರದ ಜಲಶಕ್ತಿ ಸಚಿವಾಲಯದ ಜಲಸಂಪನ್ಮೂಲ ಇಲಾಖೆ, ನದಿ ಅಭಿವೃದ್ಧಿ ಮತ್ತು ಗಂಗಾ ಪುನರುಜ್ಜೀವನ ಕೇಂದ್ರ ಬೆಂಗಳೂರಿನ ನೈಋತ್ಯ ಪ್ರದೇಶದ ಅಂತರ್ಜಲ ಮಂಡಳಿಯಿಂದ ಜಲಚರ ನಕ್ಷೆ, ಅಂತರ್ಜಲ–ಸಂಬಂಧಿತ ಸಮಸ್ಯೆಗಳು ಮತ್ತು ಅಂತರ್ಜಲ ನಿರ್ವಹಣೆ ಕುರಿತು 3ನೇ ಶ್ರೇಣಿ ತರಬೇತಿ ಕಾರ್ಯಕ್ರಮವನ್ನು ನಗರದ ಕೃಷಿ ಎಂಜಿನಿಯರಿಂಗ್ ಕಾಲೇಜಿನ ಸಿಲ್ವರ್ ಜುಬಿಲಿ ಸೆಮಿನಾರ್ ಹಾಲ್‌ನಲ್ಲಿ ಡಿಸೆಂಬರ್ 10ರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಬೆಂಗಳೂರಿನ ಸಿಜಿಡ್ಲೂಬಿ, ಎಸ್.ಡ್ಲೂಆರ್ ಪ್ರಾದೇಶಿಕ ನಿರ್ದೇಶಕರಾದ ಜಿ.ಕೃಷ್ಣಮೂರ್ತಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಯುಎಎಸ್ ಉಪಕುಲಪತಿಗಳಾದ ಡಾ.ಹನುಮಂತಪ್ಪ, ಕಾಲೇಜ್ ಆಫ್ ಅಗ್ರಿಕಲ್ಚರಲ್ ಇಂಜಿನಿಯರಿಂಗ್ ಡೀನ್ ಡಾ.ಎಂ.ಎಸ್.ಅಯ್ಯನಗೌಡರು, ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ವಿಸ್ತರಣೆ ನಿರ್ದೇಶಕರಾದ ಎ.ಆರ್.ಕುರುಬರ್ ಅವರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ರಾಯಚೂರು ತಾಲೂಕಿನಲ್ಲಿ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

**ರಾಯಚೂರು,ಡಿ.9–**ಇಲ್ಲಿನ ರಾಯಚೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಅಂಗನವಾಡಿ ಸಹಾಯಕಿಯರ ಖಾಲಿ ಇರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಯಾಪಲದಿನ್ನಿಯ ಕೇಂದ್ರ–2ರ ಅಂಗನವಾಡಿ ಕಾರ್ಯಕರ್ತೆ ಹುದ್ದೆಯು ಪರಿಶಿಷ್ಟ ಜಾತಿಗೆ, ಮಮದಾಪೂರು ಗ್ರಾಮ ಪಂಚಾಯತಿಯ ಆಶಾಪೂರ ಕೇಂದ್ರ–2 ಪರಿಶಿಷ್ಟ ಜಾತಿಗೆ, ಆತ್ಕೂರು ಕೇಂದ್ರ–4 ಪರಿಶಿಷ್ಟ ಪಂಗಡಕ್ಕೆ, ವಾರ್ಡ್ ನಂ.01ರ ರಾಮಾಂಜನೇಯ್ಯ ಕಾಲೋನಿ ಕೇಂದ್ರ–1 ಪರಿಶಿಷ್ಟ ಜಾತಿಗೆ, ಮಂಗಳವಾರಪೇಟೆ ಕೇಂದ್ರ– 5 ಪರಿಶಿಷ್ಟ ಜಾತಿಗೆ, ಎಲ್.ಬಿ.ಎಸ್ ನಗರ ಕೇಂದ್ರ–4 ಸಾಮಾನ್ಯ ವರ್ಗಕ್ಕೆ, ಯರಮರಸ್ ಕ್ಯಾಂಪ್ ಕೇಂದ್ರ–2 ಸಾಮಾನ್ಯ ವರ್ಗಕ್ಕೆ, ಮಾಣಿಕನಗರ ಕೇಂದ್ರ–1 ಸಾಮಾನ್ಯ ವರ್ಗ, ಉಮರನಗರ ಕೇಂದ್ರ–2 ಸಾಮಾನ್ಯ ವರ್ಗ, ಹುಂಡೇಕಾರ ಕಾಲೋನಿ ಕೇಂದ್ರ ಸಾಮಾನ್ಯ ವರ್ಗ, ಎಲ್.ಬಿ.ಎಸ್ ನಗರ ಕೇಂದ್ರ–1 ಸಾಮಾನ್ಯ ವರ್ಗ, ವಾರ್ಡ್ ನಂ:23ರ ಗದ್ವಾಲ ರಸ್ತೆ ಕೇಂದ್ರ–4 ಸಾಮಾನ್ಯ ವರ್ಗ, ನೀರಬಾವಿಕುಂಟಾ ಕೇಂದ್ರ–6 ಸಾಮಾನ್ಯ ವರ್ಗ, ವಾರ್ಡ್ ನಂ:2 & 3 ಮದರಟ್ರಸ್ಟ್ ಸಾಮಾನ್ಯ ವರ್ಗ, ಸಗಮಕುಂಟಾ ಗ್ರಾಮ ಪಂಚಾಯತಿಯ ಕೊರ್ವಿಹಾಳ ಕೇಂದ್ರ–2 ಸಾಮಾನ್ಯ ವರ್ಗ, ಮಡ್ಡಿಪೇಟೆ ಕೇಂದ್ರ–6 ಸಾಮಾನ್ಯ ವರ್ಗ, ಕೆ.ಇ.ಬಿ ಕಾಲೋನಿ ಕೇಂದ್ರ ಸಾಮಾನ್ಯ ವರ್ಗ, ವಾರ್ಡ್ ನಂ:02ರ ಸುಖಶಾಂತಿ ನಗರ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದು, ಈ ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಆಸಕ್ತರು ಜನವರಿ 7ರೊಳಗಾಗಿ ಆನ್‌ಲೈನ್ ವಿಳಾಸ: https://karnemakaone.kar.nic.in/abcd/ ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ಅಪೂರ್ಣ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಕಚೇರಿಯ ಸಮಯದಲ್ಲಿ ಸಂಪರ್ಕಿಸುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತರ ಸಹಕಾರ ಸಂಘಕ್ಕೆ ಗ್ಲೋಬಲ್ ಎಕ್ಸಲೆನ್ಸ್ ಪ್ರಶಸ್ತಿ



**ಬೆಂಗಳೂರು,ಡಿ.9–** ಕರ್ನಾಟಕ ರಾಜ್ಯ ಪತ್ರಕರ್ತರ ಸಹಕಾರ ಸಂಘಕ್ಕೆ ನ್ಯಾಶನಲ್ ಕೋಆಪರೇಟಿವ್ ಗ್ಲೊಬಲ್ ಎಕ್ಸಲೆನ್ ಪ್ರಶಸ್ತಿ ಲಭಿಸಿದೆ.ಯಲಹಂಕದಲ್ಲಿ ನಡೆದ ಗ್ಲೊಬಲ್ ಸಹಕಾರ ಅಭಿವೃದ್ಧಿ ಶೃಂಗಸಭೆಯಲ್ಲಿ ಸಹಕಾರ ಸಂಘದ ಕಾರ್ಯದರ್ಶಿ ರಘು ಅವರು ಪ್ರಶಸ್ತಿ ಸ್ವೀಕರಿಸಿದರು.ಹಲವಾರು ಮಹನೀಯರ ಪರಿಶ್ರಮದ ಫಲವಾಗಿ 75ನೇ ವಸಂತಗಳನ್ನು ಪೂರೈಸಿ ಮುನ್ನಡೆಯುತ್ತಿರುವ ಕರ್ನಾಟಕ ಪತ್ರಕರ್ತರ ಸಹಕಾರ ಸಂಘಕ್ಕೆ ಇಂತಹ ಸಂದರ್ಭದಲ್ಲಿ ಪ್ರಶಸ್ತಿ ಲಭಿಸಿರುವುದು ಸಂಘದ ನಿರ್ದೇಶಕರಲ್ಲಿ ಮತ್ತಷ್ಟು ಹುರುಪು ಮೂಡಿಸಿದೆ.

# ರಾಜ್ಯಸರ್ಕಾರದ ವಿರುದ್ಧ ಸಿಡಿದೆದ್ದ ರೈತರಿಂದ ಸುವರ್ಣಸೌಧಕ್ಕೆ ಮುತ್ತಿಗೆ, ರೈತ ಮುಖಂಡರು, ಬಿಜೆಪಿ ನಾಯಕರು ವಶಕ್ಕೆ





**ಬೆಳಗಾವಿ,ಡಿ.9–** ರಾಜ್ಯಸರ್ಕಾರದ ರೈತ ವಿರೋಧಿ ಧೋರಣೆ ಖಂಡಿಸಿ ತಕ್ಷಣವೇ ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತೆರೆಯಬೇಕೆಂದು ಒತ್ತಾಯಿಸಿ ಪ್ರತಿಪಕ್ಷ ಬಿಜೆಪಿ ಬೃಹತ್ ಪ್ರತಿಭಟನೆ ನಡೆಸುವ ಮೂಲಕ ಸರ್ಕಾರಕ್ಕೆ ಬಿಸಿ ಮುಟ್ಟಿಸಿತು.

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕರಾದ ಮುನಿರತ್ನ, ಬಾಲಚಂದ್ರ ಜಾರಕಿಹೊಳಿ, ಶಶಿಕಲಾ ಜೊಲ್ಲೆ, ಮೇಲನೆ ಸದಸ್ಯರಾದ ರವಿಕುಮಾರ್, ನವೀನ್, ಭಾರತಿಶೆಟ್ಟಿ, ರೈತ ಮೋರ್ಚಾ ಅಧ್ಯಕ್ಷ ನಡಹಳ್ಳಿ, ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಸೇರಿದಂತೆ ವಿವಿಧ ಮೋರ್ಚಾಗಳ ಅಧ್ಯಕ್ಷರು, ಪದಾಧಿಕಾರಿಗಳು ಮತ್ತಿತರರು ಭಾಗಿಯಾಗಿದ್ದರು.

ಬೆಳಗಾವಿಯ ಮಾಲಿನಿ ಮೈದಾನದಲ್ಲಿ ನಡೆದ ಪ್ರತಿಭಟನೆಯಲ್ಲಿ ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ್ದ ಸಾವಿರಾರು ರೈತರು ಭಾಗಿಯಾಗಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಿದರು.ಮಾಲಿನಿ ಮೈದಾನದಿಂದ ರಾಷ್ಟ್ರಿಯ ಹೆದ್ದಾರಿ 4 ರ ಮೂಲಕ ಸುವರ್ಣ ಸೌಧ ಮುತ್ತಿಗೆ ಹಾಕಲು ಪ್ರಯತ್ನಿಸಿದರಾದರೂ ಪೊಲೀಸರು ಅದಕ್ಕೆ ಅವಕಾಶ ಕೊಡದೆ ರೈತರನ್ನು ವಶಕ್ಕೆ ಪಡೆದರು. ತೊಲಗಲಿ ತೊಲಗಲಿ ಕಾಂಗ್ರೆಸ್ ಸರ್ಕಾರ ತೊಲಗಲಿ, ಛಾಟಿ ಏಟು ಛಾಟಿ ಏಟು ಕೊಡಲೇಬೇಕು ಛಾಟಿ ಏಟು ಎಂಬ ಧಿಕ್ಕಾರ ಘೋಷಣೆಗಳನ್ನು ಕೂಗಿದ ಪ್ರತಿಭಟನಾ ರೈತರು ತೊಗರಿಬೇಳೆ, ಮೆಕ್ಕೆ ಜೋಳವನ್ನು ಪ್ರದರ್ಶನ ಮಾಡಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಹಸಿರು ಟವೆಲ್ ಹಾಗೂ ಹಳದಿ ಬಣ್ಣದ ರುಮಾಲು ಧರಿಸಿದ್ದ ಪ್ರತಿಭಟನಾ ನಿರತರು ರಾಜ್ಯ ಸರ್ಕಾರ ತನ್ನ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಕೇಂದ್ರ ಸರ್ಕಾರದ ಮೇಲೆ ಅನಗತ್ಯವಾಗಿ ಗೂಬೆ ಕೂರಿಸುವ ಪ್ರಯತ್ನ ಮಾಡುತ್ತಿದೆ ಎಂದು ಕಿಡಿಕಾರಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ದೇಶದಲ್ಲೆ ಅತೀ ಹೆಚ್ಚು ರೈತರು ಆತಹತ್ಯೆ ಮಾಡಿಕೊಂಡಿರುವ ರಾಜ್ಯವೆಂದರೆ ಕರ್ನಾಟಕ. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲಾ ರೈತರ ಆತಹತ್ಯೆ ಪ್ರಕರಣಗಳು ಸರ್ವೆ ಸಾಮಾನ್ಯವಾಗಿವೆ. ಅನ್ನದಾತರ ಹಿತ ಕಾಪಾಡುವ ಬದಲು ಸಿಎಂ ಮತ್ತು ಡಿಸಿಎಂ ಕುರ್ಚಿ ಕದನದಲ್ಲಿ ನಿರತರಾಗಿದ್ದಾರೆ ಎಂದು ವಾಗ್ದಾಳಿ ನಡೆಸಿದರು.ರಾಜ್ಯ ಸರ್ಕಾರ ಕಬ್ಬು ಬೆಳೆಗಾರರ ಸಮಸ್ಯೆಯನ್ನು ಇತ್ಯರ್ಥಪಡಿಸುತ್ತಿರಲಿಲ್ಲ. ರೈತರು ರಸ್ತೆಗಿಳಿದು ಹೆದ್ದಾರಿಗಳನ್ನು ಬಂದ್ ಮಾಡಿ ಬಿಸಿ ಮುಟ್ಟಿಸಿದರು. ವಿಧಿಯಿಲ್ಲದೆ ಬೆಂಬಲ ಬೆಲೆ ನೀಡಿ ಖರೀದಿಸಿದರು.ರೈತರ ಆತಹತ್ಯೆಗಳು ನಿರಂತರವಾಗಿ ಮುಂದುವರೆಯುತ್ತಿದ್ದರೂ ಸರ್ಕಾರ ಮಾತ್ರ ಅವರನ್ನು ಕಣ್ಣೆತ್ತಿಯೂ ನೋಡದೇ ಕುರುಡಾಗಿದೆ ಎಂದು ಕಟಕಿಯಾಡಿದರು.

ತನ್ನ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಲು ರಾಜ್ಯಸರ್ಕಾರ ಕೇಂದ್ರದ ಮೇಲೆ ಪ್ರತಿಯೊಂದಕ್ಕೂ ಬೊಟ್ಟು ಮಾಡುತ್ತಿದೆ. ಮೆಕ್ಕೆಜೋಳಕ್ಕೆ ಎಂಎಸ್‌ಪಿ ಅಡಿ ಪ್ರತೀ ಕ್ವಿಂಟಾಲ್‌ಗೆ 2,400 ರೂ. ಬೆಂಬಲ ಬೆಲೆ ಘೋಷಣೆ ಮಾಡಿದೆ. ಆದರೂ ಖರೀದಿ ಕೇಂದ್ರಗಳನ್ನು ತೆರೆಯದೆ ಕೇಂದ್ರದ ಮೇಲೆ ಬೊಟ್ಟು ಮಾಡುತ್ತದೆ. ಮೊದಲು ನೀವು ಖರೀದಿ ಕೇಂದ್ರಗಳನ್ನು ತೆರೆಯಿರಿ ಎಂದು ಆಗ್ರಹಿಸಿದರು.ಪರಿಷತ್ ಸದಸ್ಯ ಸಿ.ಟಿ.ರವಿ ಮಾತನಾಡಿ, ನಾವು ಯಾವುದೇ ವೈಯಕ್ತಿಕ ಹಿತಾಸಕ್ತಿ ಇಟ್ಟುಕೊಂಡು ಪ್ರತಿಭಟನೆ ನಡೆಸುತ್ತಿಲ್ಲ. ರೈತರು ಬೀದಿಗಿಳಿದು ಹೋರಾಟ ಮಾಡುತ್ತಿದ್ದಾರೆ. ಕಲ್ಯಾಣ ಕರ್ನಾಟಕ ಮತ್ತು ಮಧ್ಯ ಕರ್ನಾಟಕದಲ್ಲಿ ತೊಗರಿಬೇಳೆ ಮತ್ತು ಮೆಕ್ಕೆಜೋಳ ಖರೀದಿ ಮಾಡದೇ ರೈತರ ಹೊಟ್ಟೆಗೆ ಹೊಡೆಯುತ್ತಿದ್ದೀರಿ. ಒಂದು ಕಡೆ ನಮದು ರೈತಪರ ಸರ್ಕಾರ ಎನ್ನುತ್ತಿರಿ. ಮತ್ತೊಂದು ಕಡೆ ಅದೇ ರೈತರಿಗೆ ಅನ್ಯಾಯ ಮಾಡುತ್ತಿದ್ದೀರಿ. ಇದು ಯಾವ ನ್ಯಾಯ ಎಂದು ಪ್ರಶ್ನೆ ಮಾಡಿದರು.

ರೈತರ ಪರವಾಗಿ 30 ಜಿಲ್ಲೆಗಳಲ್ಲಿ ಹೋರಾಟ ಮಾಡಿದ್ದೇನೆ. ಅವರಿಗೆ ನ್ಯಾಯ ಸಿಗಬೇಕೆಂಬುದು ನಮ ಒತ್ತಾಸೆ. ಪ್ರತಿ ಕ್ವಿಂಟಾಲ್ ಕಬ್ಬಿಗೆ 3400 ರೂ. ನಿಗದಿಪಡಿಸಿದೆ. ನೀವು ಅಷ್ಟು ಹಣ ಕೊಟ್ಟಿದ್ದರೆ ರೈತರು ರಾಷ್ಟ್ರಿಯ ಹೆದ್ದಾರಿಗಳನ್ನು ಬಂದ್ ಮಾಡುತ್ತಿದ್ದರಾ? ಕೇಂದ್ರ ಸರ್ಕಾರದ ಎಫ್‌ಆರ್‌ಪಿ ಪ್ರಕಾರವೇ ರೈತರಿಗೆ ನ್ಯಾಯ ಕೊಡಿಸಿದ್ದರೆ ಈ ಸಮಸ್ಯೆ ಬರುತ್ತಿತ್ತೆ ಸಕ್ಕರೆ ಸಚಿವ ಶಿವಾನಂದ ಪಾಟೀಲ್‌ರು ರೈತರ ಪರವಾಗಿದ್ದಾರೋ ಅಥವಾ ಸಕ್ಕರೆ ಕಾರ್ಖಾನೆಯ ಮಾಲೀಕರ ಪರವಾಗಿದ್ದಾರೋ ಎಂದು ತರಾಟೆಗೆ ತೆಗೆದುಕೊಂಡರು.

ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತೆರೆಯಿರಿ ಎಂದರೆ ಶಾಸಕರ ಖರೀದಿ ಕೇಂದ್ರಗಳನ್ನು ತೆರೆಯಲು ಸರ್ಕಾರ ಹೊರಟಿದೆ. ತುಂಗಭದ್ರಾ ಅಣೆಕಟ್ಟಿನ ಗೇಟ್ ದುರಸ್ತಿಯಾಗಿ ಒಂದೂವರೆ ವರ್ಷ ಕಳೆದಿದೆ. ಈಗಲೂ ಅದನ್ನು ದುರಸ್ತಿ ಮಾಡಿಲ್ಲ. ನಿಮಗೆ ರೈತರ ಸಮಸ್ಯೆಗಿಂತ ಯಾವ ಶಾಸಕರನ್ನು ಯಾವ ಕಡೆ ಸೆಳೆಯಬೇಕು. ಕುರ್ಚಿ ಹೇಗೆ ಭದ್ರ ಪಡಿಸಬೇಕು. ಇದರಲ್ಲೇ? ನಿರತರಾಗಿದ್ದಾರೆ ಎಂದು ಸಿಡಿಮಿಡಿಗೊಂಡರು.

ವಿಧಾನಪರಿಷತ್‌ನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಮಾತನಾಡಿ, ಇದು ರೈತ ವಿರೋಧಿ ಸರ್ಕಾರ. ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತೆರೆಯದೇ ಅವರಿಗೆ ವಂಚನೆ ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಟಿ ಕೋಳಿ ತಿನ್ನುವುದರಲ್ಲಿ ಬ್ಯುಸಿಯಾಗಿದ್ದಾರೆ. ಇಡೀ ಸರ್ಕಾರ ಹುಚ್ಚಾಟದಲ್ಲಿ ಮುಳುಗಿದೆ ಎಂದು ವಾಗ್ದಾಳಿ ನಡೆಸಿದರು.

## ಪರಿಷತ್‌ನಲ್ಲಿ ಕಾಂಗ್ರೆಸ್‌ಗೆ ಬಹುಮತ, ಸಭಾಪತಿ ಬದಲಾವಣೆಗೆ ಮುಂದಾಗುತ್ತಾ ಸರ್ಕಾರ..?

**ಬೆಳಗಾವಿ,ಡಿ.9–** ಆಡಳಿತಾರೂಢ ಕಾಂಗ್ರೆಸ್ ವಿಧಾನಪರಿಷತ್ ಗೆ ನಾಲ್ಕು ಸದಸ್ಯರನ್ನು ನಾಮನಿರ್ದೇಶನ ಮಾಡಿರುವ ಕಾರಣ ಮೇಲ್ಮನೆಯಲ್ಲಿ ಕಾಂಗ್ರೆಸ್ ತನ್ನ ಬಲವನ್ನು ವೃದ್ಧಿಸಿಕೊಂಡಿದೆ. 75 ಸದಸ್ಯ ಬಲದ ವಿಧಾನಪರಿಷತ್‌ನಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಿಂದ ವಿಪಕ್ಷಗಳ ಬಲ ಹೆಚ್ಚಿದ್ದವು. ಇದರಿಂದಾಗಿ ವಿಧಾನಸಭೆಯಲ್ಲಿ ವಿಧೇಯಕ ಮಂಡನೆಯಾಗಿ ಅಂಗೀಕಾರಗೊಂಡರೂ ಪರಿಷತ್‌ನಲ್ಲಿ ಹಿನ್ನಡೆಯಾಗುತ್ತಿತ್ತು. ಸಭಾಪತಿ ಹಾಗೂ ಉಪ ಸಭಾಪತಿ ಸ್ಥಾನಗಳು ಬಿಜೆಪಿಯ ಬಳಿ ಇರುವುದರಿಂದ ಆಡಳಿತದಲ್ಲಿದ್ದರೂ ಕಾಂಗ್ರೆಸ್‌ಗೆ ಪರಿಷತ್ ಬಲಿಷ್ಠವಾಗಲು ಸಾಧ್ಯವಿರಲಿಲ್ಲ.

ಇದೀಗ ನಾಲ್ವರು ನಾಮನಿರ್ದೇಶಿತ ಸದಸ್ಯರು ಪರಿಷತ್ ಗೆ ನೇಮಕವಾಗಿದ್ದಾರೆ, ಈ ಮೂಲಕ ಕಾಂಗ್ರೆಸ್ ಸಂಖ್ಯಾ ಬಲ 37, ಬಿಜೆಪಿ, 29, ಜೆಡಿಎಸ್ 7 ಪಕ್ಷೇತರ 1 ಇರಲಿದೆ. ಈ ಮೂಲಕ ಕಾಂಗ್ರೆಸ್ ವಿಧಾನಪರಿಷತ್‌ನಲ್ಲೂ ಮೇಲುಗೈ ಸಾಧಿಸಿದೆ. ಮೇಲನೆ ನಾಲ್ಕು ಸ್ಥಾನಕ್ಕೆ ಕೆ ಶಿವಕುಮಾರ್, ರಮೇಶ್ ಬಾಬು, ಜಕ್ಕಪ್ಪವರ ಹಾಗೂ ಆರತಿ ಕೃಷ್ಣ ಅವರನ್ನು ನೇಮಕ ಮಾಡಲಾಗಿದೆ.



ಈ ಸ್ಥಾನಕ್ಕೆ ಸಾಕಷ್ಟು ಮಂದಿ ಆಕಾಂಕ್ಷಿಗಳು ಇದ್ದರು. ನಾಲ್ವರ ಪೈಕಿ ರಮೇಶ್ ಬಾಬು ಅವರ ಅಧಿಕಾರ ಅವಧಿ 2026ರ ಜುಲೈ 21 ರವರೆಗೆ ಇರಲಿದೆ. ಉಳಿದವರಿಗೆ ಆರು ವರ್ಷಗಳ ಕಾಲ ಪರಿಷತ್ ಸದಸ್ಯರಾಗಿ ಇರುವ ಅವಕಾಶ ಇದೆ. ಒಂದು ವೇಳೆ ನನ್ನ ವಿರುದ್ಧ ಕಾಂಗ್ರೆಸ್ ಸದನದಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಿದರೆ ನಾನು ಒಂದು ಕ್ಷಣವೂ ಅಧಿಕಾರದಲ್ಲಿ ಕೂರುವುದಿಲ್ಲ ಎಂದು ಈಗಾಗಲೇ ಬಸವರಾಜ್ ಹೊರಟ್ಟಿಯವರು ಹೇಳಿದ್ದಾರೆ.

ಒಂದು ಮೂಲದ ಪ್ರಕಾರ, ಪ್ರಸಕ್ತ ಅಧಿವೇಶನದಲ್ಲಿ ಸರ್ಕಾರ ಅವಿಶ್ವಾಸ ನಿರ್ಣಯ ಮಂಡಿಸುವ ಸಾಧ್ಯತೆಗಳು ತೀರಾ ಕಡಿಮೆ. ಜನವರಿ ತಿಂಗಳಿನಲ್ಲಿ ನಡೆಯುವ ವರ್ಷದ ಮೊದಲ ಅಧಿವೇಶನ ನಂತರ ಮಾರ್ಚ್‌ನಲ್ಲಿ ಬಜೆಟ್ ಅಧಿವೇಶನದ ವೇಳೆ ಹೊರಟ್ಟಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಸಂಭವವಿದೆ. ಅಷ್ಟರೊಳಗೆ ಅವರು ಗೌರವಯುತವಾಗಿ ತಮ ಸ್ಥಾನಕ್ಕೆ ರಾಜೀನಾಮೆ ನೀಡಿದರೆ ಸರ್ಕಾರ ಈ ಪ್ರಯತ್ನದಿಂದ ಹಿಂದೆ ಸರಿಯಲಿದೆ.
ಮುಂದುವರಿಯುವ ದುಸ್ಸಾಹಸಕ್ಕೆ ಬಂದರೆ, ವಿಧಿಯಿಲ್ಲದೆ ಸಭಾಪತಿ ಮತ್ತು ಉಪಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಸಾಧ್ಯತೆ ಇದೆ. ಸದನದಲ್ಲಿ ತಮಗೆ ಬಹುಮತಕ್ಕೆ ಒಂದು ಸ್ಥಾನದ ಕೊರತೆಯಿದ್ದು, ಪಕ್ಷೇತರ ಅಭ್ಯರ್ಥಿಯಾಗಿರುವ ಲಖನ್ ಜಾರಕಿಹೊಳಿ ಅವರ ಬೆಂಬಲದಿದ ಸಭಾಪತಿ ಮತ್ತು ಉಪಸಭಾಪತಿ ಸ್ಥಾನವನ್ನು ಪಡೆಯಬಹುದೆಂದು ಕೆಲವು ಸದಸ್ಯರು, ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಸಲಹೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

## ಕೆಎಂಎಫ್ ಮಾದರಿಯಲ್ಲಿ ತೊಗರಿ ಖರೀದಿಗೆ ಆಗ್ರಹ

**ಕಲಬುರಗಿ,ಡಿ.9–** ಕೆಎಂಎಫ್ ಮಾದರಿಯಲ್ಲಿ ತೊಗರಿ ಖರೀದಿ ಕೇಂದ್ರ ಆರಂಭಿಸುವದು ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಇಂದು ಸಂಯುಕ್ತ ಹೋರಾಟ ಕರ್ನಾಟಕ ಕಲಬುರಗಿವತಿಯಿಂದ ಜಿಲ್ಲಾಧಿಕಾರಿ ಕಚೇರಿ ಮುಂದೆ ತೊಗರಿ ಧಾನ್ಯ ಸುರುವಿ ಅನಿರ್ದಿಷ್ಟ ಧರಣಿ ಆರಂಭಿಸಲಾಯಿತು. ರೈತರ ಆತ್ಮಹತ್ಯೆ ತಡೆಗಟ್ಟಬೇಕು.ನಿರಂತರವಾಗಿ ಪಂಪ್‌ಸೆಟ್ ರೈತರಿಗೆ ಹಗಲು ಹೊತ್ತಿನಲ್ಲಿ 12 ತಾಸು ವಿದ್ಯುತ್ ವಿದ್ಯುತ್ ಪೂರೈಕೆ ಮಾಡಬೇಕು.ಹೊರದೇಶದ ತೊಗರಿ ಮೇಲೆ ಶೇ 50 ರಷ್ಟು ಇಂಪೋರ್ಟ ಡ್ಯೂಟಿ ಹಾಕಬೇಕು.ಕೇಂದ್ರ ಸರಕಾರ 1 ಸಾವಿರ ರೂ, ರಾಜ್ಯ ಸರಕಾರ 5 ನೂರು ಆವರ್ತನಿಧಿ ಕೊಡಬೇಕು. ತೊಗರಿ ಮಂಡಳಿ ಬಲಪಡಿಸಬೇಕು ಎಂದು ರೈತರು ಆಗ್ರಹಿಸಿದರು, ಪ್ರತಿಭಟನೆಯಲ್ಲಿ ಉಮಾಪತಿ ಪಾಟೀಲ, ಮಹಾಂತಗೌಡ ನಂದಿಹಳ್ಳಿ,ನಾಗೇಂದ್ರಪ್ಪ ಥಂಬೆ,ಶರಣಬಸಪ್ಪ ಮಮಶೆಟ್ಟಿ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಪಾಲ್ಗೊಂಡರು.

# ದೇಶದ 2ನೇ ಅತಿದೊಡ್ಡ ಖಾದಿ ರಾಷ್ಟ್ರಧ್ವಜ ಅನಾವರಣ

**ಬೆಳಗಾವಿ ಸುವರ್ಣಸೌಧ,ಡಿ.9–** ಬೆಳಗಾವಿ ಸುವರ್ಣಸೌಧದ ಪಶ್ಚಿಮ ದ್ವಾರದಲ್ಲಿ ರಾಷ್ಟದ ಎರಡನೇ ಅತಿ ದೊಡ್ಡ ಖಾದಿ ರಾಷ್ಟ್ರಧ್ವಜವನ್ನು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಡಿ.9ರಂದು ಚರಕ ತಿರುಗಿಸುವ ಮೂಲಕ ಅನಾವರಣಗೊಳಿಸಿದರು.
ಇದೆ ವೇಳೆ, ರಾಷ್ಟಗೀತೆ ಮೊಳಗಿತು. ರಾಷ್ಟಪಿತ ಮಹಾತ್ಮಾ ಗಾಂಧೀಜಿಯವರು ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ ನೆನಪಾರ್ಥ ಇತ್ತೀಚೆಗೆ ನಡೆದ ಗಾಂಧೀ ಭಾರತ ಎನ್ನುವ ರಾಷ್ಟ್ರಪ್ರೇಮದ ಅದ್ಭುತ ಕಾರ್ಯಕ್ರಮ ನಡೆದ ಬೆನ್ನಲ್ಲೇ ಮತ್ತೊಂದು ಮಹತ್ವದ ರಾಷ್ಟಪ್ರೇಮದ ಕಾರ್ಯಕ್ರಮ ಗಂಡುಮೆಟ್ಟಿನ ನಾಡು ಬೆಳಗಾವಿಯಲ್ಲಿ ನೆರವೇರುತ್ತಿದ್ದಂತೆ ಸೇರಿದ್ಧ ಜನಸ್ತೋಮದಿಂದ ಕರತಾಡನ ಕೇಳಿ ಬಂದಿತು.
75 ಅಡಿ ಉದ್ದ ಹಾಗೂ 55 ಅಡಿ ಅಗಲದ ವಿಶಾಲ ದ್ವಜವು ದೇಶಪ್ರೇಮದ ಸಂಕೇತವಾಗಿದ್ದು, ನೋಡುಗರಲ್ಲಿ ದೇಶಭಕ್ತಿಯ ಸುಂದರ ಭಾವನೆಗಳನ್ನು ಬಿತ್ತಲಿದೆ. ಇಂತಹ ಮಹತ್ವದ ಧ್ವಜದ ನಿರ್ಮಾಣಕ್ಕೆ ಶ್ರಮಿಸಿದ ವಿನೋದಕುಮಾರ ರೇವಪ್ಪ ಬಮ್ಮಣ್ಣವರ ಅವರಿಗೆ ಮುಖ್ಯಮಂತ್ರಿಗಳು ಸನ್ಮಾನಿಸಿ ಗೌರವಿಸಿದರು. ಈ ವೇಳೆ ಮುಖ್ಯಮಂತ್ರಿಗಳು ಮಾತನಾಡಿ, ವಿಧಾನಸಭೆಯ ಭವ್ಯ ಮೆಟ್ಟಿಲುಗಳ ಮೇಲೆ ಜಗತ್ತಿನ ಎರಡನೆ ಅತಿ ದೊಡ್ಡ ರಾಷ್ಟಧ್ವಜ ಅನಾವರಣಕ್ಕೆ ಶ್ರಮಿಸಿ ಉತ್ತಮ ಕಾರ್ಯ



ಮಾಡಿದ ಸಭಾಧ್ಯಕ್ಷರಾದ ಯು.ಟಿ.ಖಾದರ್ ಮತ್ತು ಅವರ ತಂಡದವರಿಗೆ ಮತ್ತು ಈ ಧ್ವಜ ನೇಯ್ಗೆಗೆ ಶ್ರಮಿಸಿದ ಕಲಬುರಗಿ ಜಿಲ್ಲೆಯ ಕಮಲಾಪುರದ ವಿನೋದಕುಮಾರ ರೇವಪ್ಪ ಬೊಮ್ಮಣ್ಣವರ ಅವರಿಗೆ ಸರ್ಕಾರದಿಂದ ಅಭಿನಂದನೆ ತಿಳಿಸುವೆ ಎಂದರು. ಖಾದಿಯು ಕೇವಲ ವಸ್ತ್ರ ಅಲ್ಲ; ಅದು ದೇಶದ ಹೆಮ್ಮೆಯ ಸಂಕೇತ ಎಂದರು.
ನಾವೆಲ್ಲರೂ ಜಾತ್ಯಾತೀತರಾಗುವುದು ಈಗ ಅತೀ ಅವಶ್ಯವಿದೆ. ಮನುಷ್ಯರು ಮನುಷ್ಯರನ್ನು ಪ್ರೀತಿಸಬೇಕು. ನಾವು ಭಾತೃತ್ವವನ್ನು ಸಾಧಿಸಿದ್ದೇವೆ. ನಾವು ದೇಶಪ್ರೇಮ ಬೆಳೆಸಿಕೊಳ್ಳದೇ ಹೋದರೆ ಮನುಷ್ಯರಾಗಿ ಬಾಳಲು ಸಾಧ್ಯವಾಗುವುದಿಲ್ಲ.
ವಿದ್ಯಾರ್ಥಿ ಯುವಜನರಲ್ಲಿ ದೇಶಭಕ್ತಿಯ ಭಾವ ಬೆಳೆಸುವ ಕಾರ್ಯವಾಗಬೇಕು ಎಂದರು. ಪ್ರತಿಯೊಬ್ಬರಿಗೂ ಸಂವಿಧಾನದ ಮಹತ್ವ ತಿಳಿಸಲು ಎಲ್ಲಾ ಕಡೆ ಸಂವಿಧಾನ ಪೀಠಿಕೆ ಬೋಧಿಸುವ ಕಾರ್ಯಕ್ರಮ ರೂಪಿಸಿದ್ದೇವೆ ಎಂದು ತಿಳಿಸಿದರು.
ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ ಅವರು ಮಾತನಾಡಿ, ಈ ತ್ರಿವರ್ಣ ಧ್ವಜದಿಂದಾಗಿ ಜನತೆಗೆ ರಾಷ್ಟ ಭಕ್ತಿ ಮೂಡಲಿದೆ. ಇದರಿಂದ ಮುಂದಿನ ಪೀಳಿಗೆಗೆ ಉತ್ತಮ ಸಂದೇಶ ರವಾನೆಯಾಗಲಿದೆ. ಇದಕ್ಕೆ ಶ್ರಮಿಸಿದ ಸಭಾಧ್ಯಕ್ಷರಾದ ಯು ಟಿ ಖಾದರ್, ಉಪಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ ಹಾಗೂ ಅವರ ತಂಡದವರಿಗೆ ಅಭಿನಂದನೆಗಳನ್ನು ತಿಳಿಸುವೆ ಎಂದರು. ಸಾರ್ವಜನಿಕ ವೀಕ್ಷಣೆಗೆ ಅವಕಾಶ ಮಾಡಿಕೊಡಬೇಕು ಎಂದು ತಿಳಿಸಿದರು.
ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್ ಅವರು ಮಾತನಾಡಿ, ಗಾಂಧೀ ಭೇಟಿ ನೀಡಿದ ನೆಲವಾದ ಬೆಳಗಾವಿಯಲ್ಲಿ ಎರಡನೇ ಅತಿ ದೊಡ್ಡ ರಾಷ್ಟಧ್ವಜದ ಅನಾವರಣ ನಡೆದಿದ್ದು ಸಂತಸ ತಂದಿದೆ. ಇದರ ಹಿಂದಿನ ಶ್ರಮ, ಬದ್ಧತೆ ಹಾಗೂ ಧ್ವಜದ ಮೇಲಿನ ಪ್ರೇಮ ಶ್ಲಾಘನೀಯವಾದುದು ಎಂದರು.
ಇದು ಕೇವಲ ಧ್ವಜವಲ್ಲ; ರಾಷ್ಟಭಕ್ತಿ, ರಾಷ್ಟಪ್ರೇಮದ ಸಂಕೇತ ಎಂದು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್ ಕೆ ಪಾಟೀಲ್ ತಿಳಿಸಿದರು. ಈ ಸಂದರ್ಭದಲ್ಲಿ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ, ಸಚಿವರಾದ ಡಾ.ಹೆಚ್.ಸಿ.ಮಹಾದೇವಪ್ಪ,ಲಕ್ಷ್ಮಿ ಹೆಬ್ಬಾಳಕರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಶಾಸಕರಾದ ಅಶೋಕ ಪಟ್ಟಣ,ತಮ್ಮಯ್ಯ, ಸಲೀಂ ಅಹ್ಮದ್, ನಸೀರ್ ಅಹ್ಮದ್ ಸೇರಿದಂತೆ ಇತರರು ಇದ್ದರು.

## ನಂದಿನಿ ಪಾರ್ಲರ್‌ಗಳಾಗಿ ಬದಲಾಗಲಿವೆ ಇಂದಿರಾ ಕ್ಯಾಂಟಿನ್‌ಗಳು




**ಬೆಂಗಳೂರು, ಡಿ.9–** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕನಸಿನ ಯೋಜನೆಯಾದ ಇಂದಿರಾ ಕ್ಯಾಂಟಿನ್‌ಗಳು ಇನ್ನು ಮುಂದೆ ಕೆಎಂಎಫ್ ಉತ್ಪನ್ನಗಳ ಮಾರಾಟ ಕೇಂದ್ರಗಳಾಗಿಯೂ ಬದಲಾಗಲಿವೆ.ಬಡವರ ಹಸಿವು ನೀಗಿಸುವ ಕೇಂದ್ರಗಳೆಂದೇ ಬಿಂಬಿತವಾಗಿದ್ದ ಇಂದಿರಾ ಕ್ಯಾಂಟಿನ್‌ಗಳು ಇತ್ತಿಚೆಗೆ ಖಾಲಿ ಹೊಡೆಯುತ್ತಿವೆ ಹೀಗಾಗಿ ಕ್ಯಾಂಟಿನ್‌ಗಳ ಉತ್ತೇಜನಕ್ಕಾಗಿ ಈ ಹೊಸ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ.
ಸರ್ಕಾರದ ಪಂಚ ಗ್ಯಾರಂಟಿಗಳಿಂದಾಗಿ ಇಂದಿರಾ ಕ್ಯಾಂಟಿನ್‌ಗಳ ನಿರ್ವಹಣೆಗೆ ಹಣಕಾಸಿನ ತೊಂದರೆ ಎದುರಾಗಿದೆ. ಇರುವ ಕ್ಯಾಂಟಿನ್‌ಗಳಿಗೆ ಬರುತ್ತಿರುವ ಗ್ರಾಹಕರ ಸಂಖ್ಯೆಯೂ ಇಳಿಮುಖವಾಗುತ್ತಿರುವುದರಿಂದ ಕ್ಯಾಂಟಿನ್‌ಗಳಲ್ಲಿ ಬದಲಿ ವ್ಯಾಪಾರಕ್ಕೆ ಅವಕಾಶ ಮಾಡಿಕೊಡಿ ಎಂಬ ಬೇಡಿಕೆ ಹೆಚ್ಚಾಗಿತ್ತು. ಜನರ ಬೇಡಿಕೆ ಮೇರೆಗೆ ಇಂದಿರಾ ಕ್ಯಾಂಟಿನ್‌ಗಳಲ್ಲಿ ಬದಲಿ ವ್ಯಾಪಾರಕ್ಕೆ ಅವಕಾಶ ಮಾಡಿಕೊಡಬೇಕು ಎಂಬ ಉದ್ದೇಶದಿಂದ ಕ್ಯಾಂಟಿನ್‌ಗಳಲ್ಲಿ ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡಲು ತೀರ್ಮಾನಿಸಲಾಗಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ.
ನಂದಿನಿ ಉತ್ಪನ್ನಗಳಿಗೆ ದೇಶಾದ್ಯಂತ ಇನ್ನಿಲ್ಲದ ಬೇಡಿಕೆ ಇದೆ ಅಂತಹ ನಂದಿನಿ ಉತ್ಪನ್ನಗಳನ್ನು ಇಂದಿರಾ ಕ್ಯಾಂಟಿನ್‌ಗಳಲ್ಲಿ ಮಾರಾಟ ಮಾಡಿದರೆ ಹೆಚ್ಚಿನ ಲಾಭವಾಗಲಿದೆ ಎಂಬ ಉದ್ದೇಶದಿಂದ ಇಂತಹ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.
ಹಣಕಾಸಿನ ತೊಂದರೆ ಎದುರಿಸುತ್ತಿರುವ ಇಂದಿರಾ ಕ್ಯಾಂಟಿನ್‌ಗಳಲ್ಲಿ ನಂದಿನಿ ಉತ್ಪನ್ನಗಳಾದ ಹಾಲು, ತುಪ್ಪ, ಬೆಣ್ಣೆ ಮತ್ತಿತರ ಉತ್ಪನ್ನಗಳನ್ನು ಮಾರಾಟ ಮಾಡಲು ಅನುಮತಿ ನೀಡಿದರೆ ಕ್ಯಾಂಟಿನ್‌ಗಳ ಮಾಲೀಕರು ಲಾಭ ಮಾಡಿಕೊಳ್ಳುವುದರ ಜೊತೆಗೆ ಬಡವರ ಹಸಿವು ನೀಗಿಸುತ್ತಿರುವ ಇಂದಿರಾ ಕ್ಯಾಂಟಿನ್‌ಗಳು ಮುಂದುವರೆಯಲಿವೆ ಎಂದು ನಾವು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ ಸರ್ಕಾರದಿಂದ ಅನುಮತಿ ಸಿಕ್ಕ ಕೂಡಲೆ ಕ್ಯಾಂಟಿನ್‌ಗಳು ನಂದಿನಿ ಪಾರ್ಲರ್‌ಗಳಾಗಿ ಬದಲಾಗಲಿವೆ ಎಂದು ಅವರು ವಿವರಿಸಿದ್ದಾರೆ.

## ಸೂಕ್ತ ಸಮಯಕ್ಕೆ ಚಿಕಿತ್ಸೆ–ವೈದ್ಯರ ಸಲಹೆ

**ಕೆ.ಆರ್.ಪುರ,ಡಿ.9–** ಸರಿಯಾದ ಸಮಯಕ್ಕೆ ಸೂಕ್ತ ತಜ್ಞ ವೈದ್ಯರ ಚಿಕಿತ್ಸೆ ಪಡೆದರೆ ಅನಗತ್ಯವಾದ ಗೊಂದಲ, ಮಾನಸಿಕ ಸ್ಥಿತಿ ಹಾಗೂ ಹಣ ವ್ಯಯವನ್ನು ತಪ್ಪಿಸಬಹುದು ಎಂದು ವೈಟ್ ಫೀಲ್ಡ್ ನ ಮೆಡಿಕವರ್ ಆಸ್ಪತ್ರೆಯ ವೈದ್ಯ ಡಾ. ಮಂಜುನಾಥ್ ಬಿ.ಜಿ ಅವರು ಹೇಳಿದರು. ವೈಟ್ ಫೀಲ್ಡ್ ಸಮೀಪದಮೆಡಿಕವರ್ ಆಸ್ಪತ್ರೆಯಲ್ಲಿ ಯಶಸ್ವಿ ಚಿಕಿತ್ಸೆ ನೀಡಿ ಜೀವ ರಕ್ಷಣೆ ಸಂಬಂಧಿಸಿದಂತೆ ವಿವರಣೆ ನೀಡಿದ ಅವರು ಸಾಮಾನ್ಯವಾಗಿ ರೋಗಗಳ ಲಕ್ಷಣ ಕಂಡುಬಂದಾಗ ಸರಿಯಾದ ಸಮಯದಲ್ಲಿ ತಜ್ಞರನ್ನು ಭೇಟಿ ಮಾಡುವುದರಿಂದ ಸಮಸ್ಯೆ ಪರಿಹಾರ ಮಾಡಬಹುದು ಎಂದು ತಿಳಿಸಿದರು.
ಮಧ್ಯಪ್ರಾಚ್ಯದ ರೋಗಿಯೊಬ್ಬರು ಕೆಮ್ಮು, ಉಸಿರಾಟದ ತೊಂದರೆ ಹಾಗೂ ಬಲ ಶ್ವಾಸಕೋಶದಲ್ಲಿ ಸಮಸ್ಯೆಯಿಂದ ಬಳಲುತ್ತಿದ್ದರು. ಪ್ರಾಥಮಿಕ ಎಕ್ಸ್–ರೆ ಮತ್ತು ಸಿಟಿ ಸ್ಕ್ಯಾನ್‌ನಲ್ಲಿ ಅವರಿಗೆ ಶ್ವಾಸಕೋಶದ ಕ್ಯಾನ್ಸರ್ ಇದೆ ಎಂದು ಅನುಮಾನ ವ್ಯಕ್ತವಾಗಿತ್ತು. ವಾರ್ಷಿಕ ಹೆಲ್ತ್ ಚೆಕ್ ಅಪ್ ಮಾಡಿಸಿದಾಗ ಅವರಿಗೆ ಶ್ವಾಸಕೋಶದ ಕ್ಯಾನ್ಸರ್ ಇದೆ ಎಂದು ಅಲ್ಲಿನ ವೈದ್ಯರು ತಿಳಿಸಿದ್ದರು .ಆದರೆ ರೋಗಿ ಮೆಡಿಕವರ್ ಆಸ್ಪತ್ರೆಯ ಶ್ವಾಸಕೋಶ ತಜ್ಞರಾದ ಡಾ. ಮಂಜುನಾಥ್ ಬಿ.ಜಿ, ಅವರನ್ನು ಸಂಪರ್ಕಿಸಿದಾಗ, ಡಾಕ್ಟರ್ ಅವರು ಎಲ್ಲಾ ವರದಿಗಳನ್ನು ಪರಿಶೀಲಿಸಿ ಶ್ವಾಸಕೋಶದ ಕ್ಯಾನ್ಸರ್ ಇಲ್ಲ ಎಂದು ಖಚಿತಪಡಿಸಿದರು. ಮುಂದಿನ ತಪಾಸಣೆಯಲ್ಲಿ, ರೋಗಿಗೆ ಅಲರ್ಜಿ ಬ್ರಾಂಕೋಪಲ್ಮನರಿ ಆಸ್ಪರ್ಜಿಲೋಸಿಸ್ ಎಂಬ ಸ್ಥಿತಿ ಬಗ್ಗೆ ಮಾಹಿತಿ ನೀಡಿದರು.
ಡಾಕ್ಟರ್ ಮಂಜುನಾಥ್ ಸೂಕ್ತ ಔಷಧೋಪಚಾರವನ್ನು ನೀಡಿದ



ಪರಿಣಾಮ, ಕೇವಲ ಎರಡು ವಾರಗಳಲ್ಲಿ ರೋಗಿಯ ಎಕ್ಸ್–ರೆ ವರದಿ ಸಂಪೂರ್ಣವಾಗಿ ಸಾಮಾನ್ಯಗೊಂಡಿತು ಮತ್ತು ಅವರು ಪೂರ್ಣ ಚೇತರಿಸಿಕೊಂಡರು.

## ವಾರದೊಳಗೆ ಭವನ ಕಾಮಗಾರಿ ಆರಂಭಿಸದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅನಿರ್ದಿಷ್ಟಾವಧಿ ಮುಷ್ಕರ ಫರ್ನಾಂಡಿಸ್ ಎಚ್ಚರಿಕೆ

**ಬೀದರ್: ಡಿ.9–**ಬಾಬು ಜಗಜೀವನರಾಮ ಭವನಕ್ಕೆ ಮೀಸಲಿಟ್ಟ ರೂ 50 ಲಕ್ಷ ಹಣ ಲಪಟಾಯಿಸಿದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರನ್ನು ಜೈಲಿಗೆ ಕಳುಹಿಸಬೇಕು ಹಾಗೆ ಈ ಭವನ ಕಾಮಗಾರಿಯನ್ನು ಜಿಲ್ಲಾ ಉಸ್ತುವಾರಿ ಮಂತ್ರಿಗಳು ಘೋಷಿಸಿದಂತೆ ಒಂದು ವಾರದೊಳಗೆ ಜಾರಿ ಮಾಡಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿ ಕಚೇರಿ ಮುಂದೆ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುವುದೆಂದು ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ರಾಜ್ಯ ಕಾರ್ಯಧ್ಯಕ್ಷ ಫರ್ನಾಂಡಿಸ್ ಹಿಪ್ಪಳಗಾಂವ ಎಚ್ಚರಿಸಿದರು.
ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 2012–13ನೇ ಸಾಲಿನಲ್ಲಿ ಬೀದರ ನಗರದಲ್ಲಿ ಡಾ. ಬಾಬು ಜಗಜೀವನ ರಾಮ ಭವನ ನಿರ್ಮಾಣಕ್ಕೆ ಅಂದಿನ ಸಮಾಜ ಕಲ್ಯಾಣ ಸಚಿವ ಎ. ನಾರಾಯಣಸ್ವಾಮಿ ಅವರು ರೂ.1.00 ಕೋಟಿ ರೂಪಾಯಿ ಅನುದಾನವನ್ನು ಭವನ ನಿರ್ಮಾಣಕ್ಕೆ ಮಂಜೂರು ಮಾಡಿರುತ್ತಾರೆ. ಅಂದಿನ ಜಿಲ್ಲಾಧಿಕಾರಿಗಳು, ಬೀದರ ನೌಬಾದ ನಗರದ ಡಯಟ್ ಕಾಲೇಜ್ ಹಿಂದುಗಡೆ 2–00 ಎಕರೆ ಜಮೀನನ್ನು ಭವನ ನಿರ್ಮಾಣಕ್ಕೆ ಗುರುತಿಸಿ ಗುದ್ದಲಿ ಪೂಜೆ ಕೂಡ ನೇರವೇರಿಸಲಾಗಿರುತ್ತದೆ.
ಕಾಮಗಾರಿ ಪ್ರಾರಂಭ ಮಾಡುವ ವೇಳೆಯಲ್ಲಿ ಈ ಜಮೀನಿನ ಕೆಳಗಡೆ ಕರೇಜ್ ಇರುವುದರಿಂದ ಕಾಮಗಾರಿ ಸ್ಥಗಿತಗೊಳಿಸಿ ತದನಂತರ ಸುಮಾರು 5–6 ವರ್ಷಗಳ ಕಾಲ ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಡ್ಡಾಡಿದ ನಂತರ ಆಗಿನ ಜಿಲ್ಲಾಧಿಕಾರಿಗಳು ಬೀದರ ನಗರದ ಚಿಕ್ಕಪೇಟನಲ್ಲಿ 1 ಎಕರೆ ಜಮೀನನ್ನು ಭವನ ನಿರ್ಮಾಣಕ್ಕೆ ಮಂಜೂರು ಮಾಡಿರುತ್ತಾರೆ. ದಿನಾಂಕ: 05–04–2025 ರಂದು ಚಿಕ್ಕಪೇಟ್‌ನ ಭವನಕ್ಕೆ ಮೀಸಲಿಟ್ಟ ಜಮೀನಿನಲ್ಲಿ ಹಾಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ, ಪೌರಾಡಳಿತ ಸಚಿವರಾದ ರಹಿಂ ಖಾನ, ಹಾಗೂ ಪ್ರಸ್ತುತ್ ಜಿಲ್ಲಾಧಿಕಾರಿ ಶೀಲ್ಪಾ ಶರ್ಮಾ, ಸಮಾಜ ಕಲ್ಯಾಣ ಉಪನಿರ್ದೇಶಕರು ಸೇರಿ ಕಾಮಗಾರಿ ಪ್ರಾರಂಭಿಸಲು ಗುದ್ದಲಿ ಪೂಜೆ ನೇರವೆರಿಸಿರುತ್ತಾರೆ. ಗುದ್ದಲಿ ಪೂಜೆ ನೇರವೆರಿಸಿದ ನಂತರ ಈಶ್ವರ ಖಂಡ್ರೆ, ರವರು ಭವನ ನಿರ್ಮಾಣಕ್ಕೆ ರೂ.5.00 ಕೋಟಿ ಹಣದ ಅಶ್ವಾಸನೆ ಕೂಡ ನೀಡಿರುತ್ತಾರೆ.
2012–13ನೇ ಸಾಲಿನಲ್ಲಿ ಭವನ ನಿರ್ಮಾಣಕ್ಕೆ ಮೀಸಲಿಟ್ಟ ರೂ.1.00 ಕೋಟಿ ರೂಪಾಯಿ ಉಳಿದಿರುತ್ತದೆ. ಆ ನಂತರ ಕಾಮಗಾರಿ ಪ್ರಾರಂಭೀಸಲು ಸಮಾಜ ಕಲ್ಯಾಣ ಉಪನಿರ್ದೇಶಕರು ಹಿಂದೇಟು ಹಾಕುತ್ತಿರುತ್ತಾರೆ. ಹೋಗಿ ವಿಚಾರಿಸಿದ್ದಾಗ ರೂ.1.00 ಕೋಟಿ ರೂಪಾಯಿಗಳು ನಿರ್ಮಿತಿ ಕೇಂದ್ರಕ್ಕೆ ಹಣ ಬಿಡುಗಡೆ ಮಾಡಿರುತ್ತೇವೆ ಎಂದು ಹೇಳುತ್ತಾರೆ. ಅಲ್ಲಿ ವಿಚಾರಿಸಿದ್ದಾಗ ನಮಗೆ ಭವನ ನಿರ್ಮಾಣಕ್ಕೆ ನಯಾ ಪೈಸೆ ಕೂಡ ಬಂದಿಲ್ಲ ಎಂದು ಹೇಳಿರುತ್ತಾರೆ. ತದನಂತರ ಸಮಾಜ ಕಲ್ಯಾಣ ಉಪನಿರ್ದೇಶಕರು ಇವರಿಗೆ ಹೊಗಿ ವಿಚಾರಿಸಿದ್ದಾಗ ನಿರ್ಮಿತಿ ಕೇಂದ್ರ ಇಲ್ಲ, ಕೆ.ಆರ್.ಐ.ಡಿ.ಎಲ್. ಗೆ ಹಣ ಕಳಿಸಿದ್ದೇವೆ ಎಂದು




ಹೇಳುತ್ತಾರೆ. ಅಲ್ಲಿನ ಅಧಿಕಾರಿಗಳಿಗೆ ವಿಚಾರಿಸಿದ್ದಾಗ ನಮಗೆ ಭವನ ನಿರ್ಮಾಣಕ್ಕೆ ನಯಾ ಪೈಸೆ ಕೂಡ ಬಂದಿಲ್ಲ ಎಂದು ಹೇಳಿರುತ್ತಾರೆ.
ಮತ್ತೆ ಪುನ:ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಿಗೆ ವಿಚಾರಿಸಿದಾಗ ಒಂದು ಕೋಟಿ ರೂಪಾಯಿಯಲ್ಲಿ ರೂ.50.00 ಲಕ್ಷ ಸರ್ಕಾರ ಹಿಂಪಡೆದಿರುತ್ತದೆ ಎಂದು ತಿಳಿಸಿರುತ್ತಾರೆ. ಉಳಿದ ರೂ.50.00 ಲಕ್ಷ ರೂಪಾಯಿ ಅಧಿಕಾರಿಗಳು ನುಂಗಿ ನೀರು ಕುಡಿದಿರುತ್ತಾರೆ. ಇದರ ಬಗ್ಗೆ ತನಿಖೆ ಕೈಗೊಂಡು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರನ್ನು ಜೈಲಿಗೆ ಕಳುಹಿಸಿ, ಆದಷ್ಟು ಬೇಗ ಭವನದ ಕಾಮಗಾರಿ ಪ್ರಾರಂಭ ಮಾಡಬೇಕು. ಒಂದು ವೇಳೆ ವಿಳಂಬ ಮಾಡಿದ್ದೆ ಆದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಎದುರುಗಡೆ ಅನಿರ್ಧಷ್ಟ ಅವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳುತ್ತೇವೆ ಎಂದು ಫರ್ನಾಂಡಿಸ್ ಹಿಪ್ಪಳಗಾಂವ ಎಚ್ಚರಿಸಿದ್ದಾರೆ.
ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿ ಜಿಲ್ಲಾ ಅಧ್ಯಕ್ಷ ವಿಜಯಕುಮಾರ್ ಹಿಪ್ಪಳಗಾಂವ, ಜಿಲ್ಲಾ ಉಪಾಧ್ಯಕ್ಷ ಕಮಲಾಕರ ಹೆಗಡೆ, ಸಾಮಾಜಿಕ ಜಾಲತಾಣ ಮುಖ್ಯಸ್ಥ ಹರೀಶ ಗಾಯಕವಾಡ, ಸದಸ್ಯರಾದ ಅಬ್ರಾಹಂ ಸೂರ್ಯವಂಶಿ, ರಾಹುಲ ನಂದಿ, ಮಾರ್ಕ್ ಸಾಗರ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮ

ಧೈರ್ಯದ ದಾರಿ

**ಸಿಂದನೂರು,ಡಿ.9**–ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ರಾಗಲಪರ್ವಿ ಇವರ ಸಂಯುಕ್ತ ಆಶ್ರಯದಲ್ಲಿ ಇಂದು ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಸದರಿ ಕಾರ್ಯಕ್ರಮವನ್ನು ಮಾನ್ಯ ಆಯುಷ್ ವೈದ್ಯಾಧಿಕಾರಿಗಳು ಶ್ರೀಮತಿ ಡಾ. ಶ್ವೇತಾಂಬರಿ ಇವರು ಗರ್ಭಿಣಿ ತಾಯಂದಿರನ್ನು ಹಾಗೂ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು.

ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಗಂಡಾಂತರ ಗರ್ಭಿಣಿಯರ ಆರೋಗ್ಯ ತಪಾಷಣೆ ಮಾಡಲಾಯಿತು, ಜೊತೆಗೆ 12ವಾರದ ಒಳಗೆ ನೋಂದಣಿ ಮಾಡಿಸಬೇಕು ಯಾವುದೇ ಮೂಢನಂಬಿಕೆ ಬಿಡಬೇಕು,ರಕ್ತ ಹೀನತೆ ಹೋಗಲಾಡಿಸಲು ಐರನ್ ಫಾಲಿಕ್ ಅಸೈಡ್ ಕಾಲ್ಸಿಯಂ ಮಾತ್ರೆ ತೆಗೆದುಕೊಂಡು, ಸರಿಯಾಗಿ ಆಹಾರದ ಪದ್ಧತಿ ಇರಬೇಕು ಪೌಷ್ಟಿಕ ಆಹಾರ ಪದ್ಧತಿ ಬಗ್ಗೆ ವೈಯಕ್ತಿಕ ಸ್ವಚ್ಛತೆಯ ಕುರಿತು ಚಳಿಗಾಲದಲ್ಲಿ ತಾಯಿ ಮಗುವಿನ ರಕ್ಷಣೆಯ ಕುರಿತು ಮಾಹಿತಿ ನೀಡಲಾಯಿತು ಸಾಂಕ್ರಾಮಿಕ ರೋಗಗಳ ಕುರಿತು ಮುಂಜಾಗ್ರತೆಯನ್ನು ವಹಿಸಬೇಕು ಎಂದು ಆರೋಗ್ಯ ಶಿಕ್ಷಣ ನೀಡಲಾಯಿತು.

ಮುಂಬರುವ ಡಿಸೇಂಬರ್ 21ರಿಂದ 24ರವರೆಗೆ ನಡೆಯುವ ಪಲ್ಸ್ ಪೋಲಿಯೊ ಕಾರ್ಯಕ್ರಮ ದಲ್ಲಿ ಯಾವುದೇ 5 ವರ್ಷದ ಒಳಗಿನ ಮಕ್ಕಳು ಲಸಿಕೆಯಿಂದ ವಂಚಿತರಗದಂತೆ ಎಲ್ಲಾ ಮಕ್ಕಳಿಗೂ ಲಸಿಕೆಯ ಎರಡು ಹನಿ ಹಾಕಿಸಿಕೊಳ್ಳುವಂತೆ ಸಾರ್ವಜನಿಕರಲ್ಲಿ ಮನವಿ, ಈ ಸಂದರ್ಭದಲ್ಲಿ ಗೀತಾ ಹಿರೇಮಠ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು, ಪಕೀರಚಂದ್ ಖಿಡಿ. HIO, ಗೀತಾ ನರ್ಸಿಂಗ್ ಆಫೀಸರ್, ಶಂಬು LTO,



ರಾಜಕುಮಾರ CHO, ಜಯದುರ್ಗ, CHO. ಶ್ರೀಮತಿ ಗಂಗಮ್ಮ PHCO,ಅಂಬಮ್ಮ PHCO, ಶ್ರೀಮತಿ ನಳಿನಿ PHCO. ಶರಣಮ್ಮ HIO, ಹಾಗೂ ಡಿ ದರ್ಜೆ ನೌಕರರು, ಆಶಾ ಕಾರ್ಯಕರ್ತೆಯರು, ಗರ್ಭಿಣಿಯರು ಸಾರ್ವಜನಿಕರು ಉಪಸ್ಥಿತರಿದ್ದರು



**ಕಲಬುರಗಿ,ಡಿ.9– ಆಲ್ ಇಂಡಿಯಾ ಎಸ್‌ಸಿ,ಎಸ್‌ಟಿ ರೈಲ್ವೆ ನೌಕರರ ಸಂಘದ ವತಿಯಿಂದ ಡಾ. ಬಿ.ಆರ್ ಅಂಬೇಡ್ಕರ್ ಅವರ ಮಹಾಪರಿನಿರ್ವಾಣ ದಿನದ ಅಂಗವಾಗಿ ರಕ್ತದಾನ ಶಿಬಿರ ಏರ್ಪಡಿಸಲಾಯಿತು. ಮಾಜಿ ಎಂಎಲ್‌ಸಿ ಅಮರನಾಥ ಪಾಟೀಲ , ಡಿಎಸ್ ಎಸ್ ಜಿಲ್ಲಾ ಸಂಚಾಲಕ ಸುರೇಶ ಹಾದಿಮನಿ,ಡಾ.ಸಚಿನ್ ಬನಸೋಡೆ,ಡಾ.ಶ್ರವಣಕುಮಾರ,ಶಿವಕುಮಾರ, ಕಲ್ಯಾಣಕುಮಾರ ಗಟ್ಟು,ಹಣಮಂತ ಬೋದನಕರ್,ಅವಿನಾಶ ಕಂಠಿ,ವಿನೋದಕುಮಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಹಲವಾರು ನೌಕರರು ರಕ್ತದಾನ ಮಾಡಿದರು.**

# ಕೆಕೆಆರ್‌ಟಿಸಿ ಬಸ್ ಪಲ್ಟಿ ಶಾಲಾ ವಿದ್ಯಾರ್ಥಿಗಳು ಸೇರಿದಂತೆ 15 ಜನರಿಗೆ ಗಾಯ ಕಂಡಕ್ಟರ್ ಸ್ಥಿತಿ ಗಂಭೀರ

ಧೈರ್ಯದ ದಾರಿ

**ದೇವದುರ್ಗ,ಡಿ.9–** ತಾಲೂಕಿನ ಬಳಿ ಕೆಕೆಆರ್‌ಟಿಸಿ ಬಸ್ ಅತಿವೇಗದಿಂದಾಗಿ ಪಲ್ಟಿಯಾಗಿದ್ದು, 15 ವಿದ್ಯಾರ್ಥಿಗಳು ಸೇರಿದಂತೆ ಹಲವರು ಗಾಯಗೊಂ ಡಿದ್ದಾರೆ. ಈ ದುರ್ಘ ಟನೆಯಲ್ಲಿ ಬಸ್ ನಿರ್ವಾಹಕನ ಸ್ಥಿತಿ ಚಿಂತಾಜನಕವಾಗಿದೆ.

ತಾಲ್ಲೂಕಿನ ಅಂಚೆಸುಗೂರು ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಕೆಕೆಆರ್‌ಟಿಸಿ (ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ) ಬಸ್ಸೊಂದು ಪಲ್ಟಿ ಯಾಗಿದ್ದು, ವಿದ್ಯಾರ್ಥಿಗಳು ಸೇರಿದಂತೆ ಸುಮಾರು 15 ಜನ ಪ್ರಯಾಣಿಕರು ಗಾಯಗೊಂಡಿದ್ದಾರೆ.

ಮಂಗಳವಾರ ಬೆಳಗ್ಗೆ ದೇವದುರ್ಗ ಠಾಣಾ ವ್ಯಾಪ್ತಿಯ ಅಂಚೆಸುಗೂರು ಗ್ರಾಮದಿಂದ ದೇವದುರ್ಗ ಪಟ್ಟಣಕ್ಕೆ ಹೊರಟಿದ್ದ ಕೆಕೆಆರ್‌ಟಿಸಿ ಬಸ್‌ನಲ್ಲಿ ನಡೆದಿದೆ. ಅಂಚೆಸುಗೂರು ಗ್ರಾಮದಿಂದ ಸ್ವಲ್ಪ ದೂರದಲ್ಲಿ, ಬಸ್ ಅತಿ ವೇಗದಲ್ಲಿ ಚಲಿಸುತ್ತಿದ್ದ ಕಾರಣದಿಂದ ಚಾಲಕನ ನಿಯಂತ್ರಣ ತಪ್ಪಿ ರಸ್ತೆಯ ಪಕ್ಕದಲ್ಲಿ ಪಲ್ಟಿಯಾಗಿದೆ. ಬಸ್ಸಿನಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಸುಮಾರು 40ಕ್ಕೂ ಹೆಚ್ಚು ಜನ ಪ್ರಯಾಣಿಸುತ್ತಿದ್ದರು.





ಈ ದುರ್ಘಟನೆಯಲ್ಲಿ ಬಸ್‌ನ ನಿರ್ವಾಹಕ ಬಸವರಾಜು ಅವರಿಗೆ ತೀವ್ರ ಸ್ವರೂಪದ ಗಾಯಗಳಾಗಿದ್ದು, ಅವರ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ. ತಕ್ಷಣ ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿದ ನಂತರ, ಗಂಭೀರವಾಗಿ ಗಾಯಗೊಂಡಿರುವ ನಿರ್ವಾಹಕ ಬಸವರಾಜು ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ.

ವಿದ್ಯಾರ್ಥಿಗಳು ಸೇರಿದಂತೆ ಉಳಿದ 15 ಜನ ಗಾಯಾಳುಗಳಿಗೆ ಪ್ರಥಮ ಚಿಕಿತ್ಸೆ ನೀಡಲಾಗಿದ್ದು, ಯಾವುದೇ ಜೀವಹಾನಿ ಸಂಭವಿಸಿಲ್ಲ ಎಂದು ಪೊಲೀಸರು ದೃಢಪ ಡಿಸಿದ್ದಾರೆ. ಘಟನೆಯ ಸುದ್ದಿ ತಿಳಿದ ತಕ್ಷಣ ಸ್ಥಳೀಯರು ಮತ್ತು ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಗೆ ನೆರವು ನೀಡಿದರು.

# ಕಾರುಣ್ಯಾಶ್ರಮದ ಕೊಡಗು ಜಿಲ್ಲಾ ಸಾರ್ವಜನಿಕ ಸಂಪರ್ಕಾಧಿಕಾರಿಗಳಾಗಿ ಅಮೀನಾ ಆಯ್ಕೆ



**ಸಿಂಧನೂರು,ಡಿ.9–** ಕೊಡಗು ಜಿಲ್ಲೆಯಲ್ಲಿ ನಿರಂತರ ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಹಲವಾರು ಜನಪರ ಸಮಾಜಪರ ಕಾರ್ಯಗಳನ್ನು ಮಾಡುತ್ತಾ ಮನೆ ಮನೆ ಮಾತಾಗಿರುವ ಅವಿನಾ ಸ್ ಡ್ರೀಮ್ಸ್ ವರ್ಲ್ಡ್ ನ ಸಂಸ್ಥಾಪಕರಾದ ಅಮೀನಾ ಎಂ. ಎಂ. ಚನ್ನಂಕೊಲ್ಲಿ ಇವರನ್ನು ಸಿಂಧನೂರಿನ ಕಾರುಣ್ಯಾಶ್ರಮದ ಕೊಡಗು ಜಿಲ್ಲಾ ಸಾರ್ವಜನಿಕ ಸಂಪರ್ಕಾಧಿಕಾರಿಗಳನ್ನಾಗಿ ಇಂದು ನೇಮಿಸಲಾಗಿದೆ ಎಂದು ಕಾರುಣ್ಯ ಸಂಸ್ಥೆಯ ಸಂಸ್ಥಾಪಕರಾದ ಅಮರಯ್ಯ ಸ್ವಾಮಿ ಹಿರೇಮಠ ಹರೇಟನೂರು ಇವರು ಪತ್ರಿಕೆಗೆ ಮಾಹಿತಿ ನೀಡಿದ್ದಾರೆ.

ಇವರ ನಿರಂತರ ಸಮಾಜ ಸೇವೆ ಮತ್ತು ಅನಾಥರ ಬಗ್ಗೆ ಕಾಳಜಿ ವಹಿಸಿ ಆ ಭಾಗದಲ್ಲಿನ ಅನಾಥರಿಗೆ ಕಾರುಣ್ಯ ಆಶ್ರಮದಲ್ಲಿ ಆಶ್ರಯ ಕೊಡಿಸಿ ಕಾರುಣ್ಯ ಆಶ್ರಮದ ಪ್ರತಿಯೊಂದು ಸೇವೆಯಲ್ಲಿ ಭಾಗಿಯಾಗುತ್ತೇನೆ ಎನ್ನುವ ಪ್ರಾಮಾಣಿಕ ನುಡಿಗಳನ್ನಾಧರಿಸಿ ಅವರನ್ನು ಕೊಡಗು ಜಿಲ್ಲೆಯ ಸಾರ್ವಜನಿಕ ಸಂಪರ್ಕಾಧಿಕಾರಿಗಳನ್ನಾಗಿ ನೇಮಿಸಿ ಆದೇಶ ಹೊರಡಿಸಲಾಗಿದೆ ಎಂದು ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಅವರು ಪತ್ರಿಕಾ ಬಳಗಕ್ಕೆ ಮಾಹಿತಿ ನೀಡಿದ್ದಾರೆ

# ಪಿಎಮ್‌ಎಸ್‌ಎಮ್‌ಎ ಶಿಬಿರದಲ್ಲಿ ಜಾಗೃತಿ



ಧೈರ್ಯದ ದಾರಿ

**ರಾಯಚೂರು,ಡಿ.9**–ಮಕ್ಕಳಲ್ಲಿ ಬೆಳವಣಿಗೆಗೆ ಅಡ್ಡಿಯಾಗುವ ಅಪೌಷ್ಟಿಕತೆಯ ನಿವಾರಣೆಗಾಗಿ 'ಪೌಷ್ಟಿಕ ಪುನಶ್ಚೇತನ ಕೇಂದ್ರ (ಎನ್‌ಆರ್‌ಸಿ)' ಗಳ ಸದುಪಯೋಗ ಪಡೆಯಿರಿ: ಡಾ ಸುನೀಲ್.

ಆಕಸ್ಮಿಕವಾಗಿ ಅಥವಾ ಇತರೆ ಕಾರಣಗಳಿಂದ ಮಗು ಅಪೌಷ್ಟಿಕತೆಗೆ ಒಳಗಾದಲ್ಲಿ ಪಾಲಕರು ತಮ್ಮ ಮಕ್ಕಳನ್ನು ಅಪೌಷ್ಟಿಕತೆಯ ನಿವಾರಣೆಗಾಗಿ ಮಕ್ಕಳ ತಜ್ಞರ ಮೂಲಕ ಆರೋಗ್ಯದ ತೊಂದರೆಯನ್ನು ಗುರ್ತಿಸಿ ಪೌಷ್ಟಿಕ ಆಹಾರೊಂದಿಗೆ ಚಿಕಿತ್ಸೆಯನ್ನು ನೀಡಿ ಗುಣಪಡಿಸುವ ರಿಮ್ಸ್ ನಲ್ಲಿರುವ "ಪೌಷ್ಟಿಕ ಪುನಶ್ಚೇತನ ಕೇಂದ್ರ (ಎನ್‌ಆರ್‌ಸಿ)" ಕ್ಕೆ ಮಕ್ಕಳನ್ನು ಕರೆದುಕೊಂಡು ಹೋಗಲು ಹರಿಜನವಾಡಾ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ ಸುನೀಲ್ ತಾಯಂದಿರಿಗೆ ಮನವಿ ಮಾಡಿದರು.

ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಡಿ ಗರ್ಭಿಣಿ ತಾಯಂದಿರ ತಪಾಸಣಾ ಶಿಬಿರಲ್ಲಿ ತಾಯಂದಿರು ಹಾಗೂ ಪಾಲಕರಿಗೆ ಜಾಗೃತಿ ನೀಡಿ ಮಾತನಾಡುತ್ತಾ ಮಗುವಿನ ಬೆಳವಣಿಗೆಗೆ ಅಡ್ಡಿಯಾಗುವ ಅಪೌಷ್ಟಿಕತೆಯನ್ನು ನಿವಾರಿಸಲು ಸರಕಾರವು ರಾಯಚೂರು ನಗರದ ರಿಮ್ಸ್ ಆಸ್ಪತ್ರೆಯ ನಾಲ್ಕನೆಯ ಮಹಡಿಯಲ್ಲಿ ಪೌಷ್ಟಿಕ ಪುನಶ್ಚೇತನ ಕೇಂದ್ರ (ಎನ್‌ಆರ್‌ಸಿ) ಇದ್ದು ಇಲ್ಲಿ 14 ದಿನಗಳ ಕಾಲ ಮಗುವಿಗೆ ಪೌಷ್ಟಿಕಾಹಾರವನ್ನು ವೈಜ್ಞಾನಿಕವಾಗಿ ನೀಡಲಾಗುವುದು ಎಂದು ತಿಳಿಸಿದರು. ಚಿಕಿತ್ಸೆ ನೀಡಲಾಗುವುದು. ತಾಯಂದಿರಿಗೆ 14 ದಿನಗಳ ಕಾಲ ಪ್ರತಿ ದಿನಕ್ಕೆ 370/– ರೂಪಾಯಿಯಂತೆ ಎನ್‌ಆರ್‌ಎಇಜಿ ಅಡಿಯ ಕೂಲಿಗೆ ಸಮಾನವಾದ ಮೊತ್ತವನ್ನು ಸಹ ಬ್ಯಾಂಕ್ ಖಾತೆಗೆ ಸಂದಾಯ ಮಾಡಲಾಗುವುದು.

ಈ ಸಂದರ್ಭದಲ್ಲಿ ದಂತ ತಜ್ಞರಾದ ಡಾ ಫೌಜೀಯಾ ಖಾಜಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಬಿಹೆಚ್‌ಇಓ ಸರೋಜಾ ಕೆ, ಫಾರ್ಮಸಿಸ್ಟ್, ಪ್ರಕಾಶ, ಎಲ್‌ಟಿಓ ಸೈಯದ್ ಖಮರುದ್ದೀನ್, ಶುಶ್ರೂಷಣಾಧಿಕಾರಿ ಲಕ್ಷ್ಮೀ, ಗಂಗಮ್ಮ, ಈರಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಮಂಜುಳಾದೇವಿ, ಗಿರಿಜಾ, ಮರಿಯಮ್ಮ, ಕಾಳಿಕಾದೇವಿ, ಎಲ್‌ಡಿಸಿ ಮುಜಾಹೀದ್, ಡೆಂಟಲ್ ಹೈಜನಿಸ್ಟ್ ಖಾದಿರ್ ಹುಸೇನ್ ಸೇರಿದಂತೆ ತಾಯಂದಿರು ಹಾಜರಿದ್ದರು.

## ಮಹಾನಂದ ಇಂಡಸ್ಟ್ರೀಜ್ ಘಟಕ ಬಂದ್ ಗೆ, ಪರಿಸರ ಮಾಲಿನ್ಯ ವಿರೋಧಿ ಹೋರಾಟ ಸಮಿತಿ ಆಗ್ರಹ!

ಪರಿಸರ ಮಾಲಿನ್ಯಕ್ಕೆ ಕಾರಣವಾದ ಮಹಾನಂದ ಇಂಡಸ್ಟ್ರೀಸ್ 4ನೇ ಮೈಲ್ ಕ್ಯಾಂಪ್ ಹತ್ತಿರದ ಅನಧಿಕೃತ ಫರ್ನಿಚರ್, ಅಲಮಾರಿ, ತಯಾರಿಕಾ ಘಟಕವನ್ನು ಬಂದ್ ಮಾಡಿ, ಕ್ರಿಮಿನಲ್ ಪ್ರಕರಣ ದಾಖಲಿಸಿ, ಪರಿಸರ ಕಾಪಾಡಿ! ಜನರ ಆರೋಗ್ಯ ಉಳಿಸಿ ! ಎಂದು ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪರಿಸರ ಅಧಿಕಾರಿಗಳು, ಹಾಗೂ ಕೈಗಾರಿಕೆ ಇಲಾಖೆ ಉಪ ನಿರ್ದೇಶಕರಿಗೆ ನಾವು ಮನವಿ ಮಾಡಿಕೊಂಡಿದ್ದೇವು.

ಮನವಿಗೆ ಸ್ಪಂದಿಸಿ, ಜಿಲ್ಲಾ ಸಹಾಯಕ ಪರಿಸರ ಅಧಿಕಾರಿಗಳು ಡಿ.ಸೆ.22 ರಂದು ಸ್ಥಳ ಪರಿಶೀಲನೆ ನಡೆಸಿ, ಸಂಬಂಧಪಟ್ಟವರಿಗೆ ವರದಿ ನೀಡಿದ್ದಾರೆ. ಜಿಲ್ಲಾ ಮತ್ತು ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಪತ್ರ ಬರೆದು ವರದಿ ನೀಡುವಂತೆ ಕೋರಿದ ಪ್ರಯುಕ್ತ ಅವರು ದಾಖಲೆ ಹಾಗೂ ನ.15 ರಂದು ಸ್ಥಳ ಪರಿಶೀಲನೆ ನಡೆಸಿ, ವರದಿ ಸಲ್ಲಿಸಿದ್ದಾರೆ.

ವರದಿಯ ಪ್ರಕಾರ ಕಾನೂನು ವಿರೋಧಿ, ಪರಿಸರ ವಿರೋಧಿ, ಸಾರ್ವಜನಿಕ ವಿರೋಧಿ, ಮಹಾನಂದ ಇಂಡಸ್ಟ್ರೀಜ್ ಉತ್ಪಾದನಾ ಘಟಕವು ಕಾನೂನು ಬಾಹಿರ ಚಟುವಟಿಕೆ ನಡೆಸುತ್ತಿರುವುದು ವರದಿಯಿಂದ ಬಹಿರಂಗಗೊಂಡಿದೆ ಕೂಡಲೇ ಮಹಾನಂದ ಇಂಡಸ್ಟ್ರೀಜ್ ನ್ನು ಕೂಡಲೇ ಬಂದ್ ಮಾಡಿ, ಜನರ ಆರೋಗ್ಯ



ಕಾಪಾಡಬೇಕು.15 ದಿನ ಗಡುವು ನೀಡಿ, ಬಂದ್ ಮಾಡದೇ ಹೋದಲ್ಲಿ ತೀವ್ರ ಪ್ರತಿಭಟನೆ ನಡೆಸುವುದು ಅನಿವಾರ್ಯ ಎಂದು ಆಗ್ರಹಿಸಿ, ಶಿರಸ್ತೇದಾರ್ ವಾಣಿ ಅವರಿಗೆ ಮನವಿ ಪತ್ರ ನೀಡಿ, ತಹಶೀಲ್ದಾರರ ಜೊತೆ ಗಂಭೀರವಾಗಿ ಚರ್ಚಿಸಿದ ನಂತರ ತಹಶೀಲ್ದಾರರು ಇದರ ಬಗ್ಗೆ ಜಿಲ್ಲಾಡಳಿತಕ್ಕೆ ಮತ್ತು ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಗೆ ತುರ್ತಾಗಿ ವರದಿ ಕಳಿಸಿ, ಮುಂದಿನ ಕ್ರಮಕ್ಕಾಗಿ ಪತ್ರ ಕಳಿಸುವುದಾಗಿ ಭರವಸೆ ನೀಡಿದರು.

ಈ ವೇಳೆ: ಸಂಚಾಲಕ ಎಂ.ಗಂಗಾಧರ, ಕನಕಪ್ಪ ಮುರಣಿ, ಹೆಚ್.ಆರ್.ಹೊಸಮನಿ, ಹನುಮಂತಪ್ಪ ಗೋಡಿಹಾಳ, ಬಸವರಾಜ ಗೋಡಿಹಾಳ, ಅಡಿವೆಪ್ಪ, ಧರಗಯ್ಯ, ಮುದಿಯಪ್ಪ, ಗೌಸ್ ಖಾನ್, ವೆಂಕೋಬ ನಾಯಕ, ಸೇರಿದಂತೆ ಇತರರಿದ್ದರು.

# ಪ್ರೋತ್ನಾಳ ವಲಯ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ಗಾನವಿ ಪ್ರಥಮ

ಧೈರ್ಯದ ದಾರಿ

**ಮಾನ್ವಿ,ಡಿ.9**–ಪ್ರತಿಭಾ ಕಾರಂಜಿ ಸ್ಪರ್ಧೆ ಯಲ್ಲಿ ಇಂಗ್ಲೀಷ್ ಕಂಠಪಾಠದಲ್ಲಿ ಪ್ರಥಮ ಸ್ಥಾನ ಪಡೆದ ಕುಮಾರಿ ಗಾನವಿ ವಿದ್ಯಾ ರ್ಥಿಗೆ ಪ್ರಶಸ್ತಿ ಪತ್ರ ನೀಡಲಾಯಿತು.

ತಾಲ್ಲೂಕಿನ ಚಿಕ್ಕಕೊಟ್ನೇಕಲ್ ಉನ್ನತೀ ಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಪೋತ್ನಾಳ ವಲಯ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ, ಪ್ರತಿಭಾನ್ವಿತ ವಿದ್ಯಾರ್ಥಿನಿ ಕುಮಾರಿ ಗಾನವಿ ಇಂಗ್ಲೀಷ್ನಲ್ಲಿ ಕಂಠಪಾಠ ಸಾಧನೆ ಮಾಡಿ, ಶಾಲೆಗೆ ಮತ್ತು ಗ್ರಾಮಕ್ಕೆ ಕೀರ್ತಿ ತಂದಿ ದ್ದಾಳೆ.ಸತತ ಎರಡನೇ ಬಾರಿ ಸಾಧನೆ

ಕುಮಾರಿ ಗಾನವಿಯವರ ಪ್ರತಿಭೆಗೆ ಇದು ಮೊದಲ ಮನ್ನಣೆಯಲ್ಲ. ಕಳೆದ ವರ್ಷ ಕೂಡ ಪೋತ್ನಾಳ ವಲಯ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ಅವರು ಪ್ರಥಮ ಸ್ಥಾನ ಪಡೆದಿದ್ದರು. ಈ ಮೂಲಕ, ಸತತ ಎರಡನೇ ಬಾರಿಗೆ ಪ್ರಶಸ್ತಿಯನ್ನು ಪಡೆದು ತಮ್ಮ ಪ್ರತಿಭೆ ಯನ್ನು ಸ್ಥಿರವಾಗಿ ಪ್ರದರ್ಶಿ ಸಿದ್ದಾರೆ.

ಗಾನವಿ ಅವರು ತಂದೆ ರಾಮನಗೌಡ ಅವರ ಪುತ್ರಿಯಾಗಿದ್ದು, ಇವರ ಈ ಸಾಧನೆಯಿಂದ ದೇವಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ, ಪೋಷಕರು ಮತ್ತು ದೇವಿಪುರ ಗ್ರಾಮಕ್ಕೆ ಹೆಮ್ಮೆ ತಂದಿದ್ದಾರೆ. ಗಾನವಿ ಯವರ ಮುಂದಿನ ತಾಲೂಕು ಮಟ್ಟ ದ ಹಂತದ ಸ್ಪರ್ಧೆಗಳಿಗೆ ಶಾಲಾ ಮು ಖ್ಯ ಶಿಕ್ಷಕರು ಸಹ ಶಿಕ್ಷಕಿಯರು ಹಾ ಗೂ ಅತಿಥಿ ಶಿಕ್ಷಕರ ಸೇರಿದಂತೆ ಶಾ ಲಾ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರು ಶುಭ ಹಾರೈಸಲಾಗಿದೆ.



Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE